3.3. **ಅನುಭವ:** ಆನೆ ನಿರ್ವಹಣೆಯಲ್ಲಿ ಅನುಭವ ಹೊಂದಿರುವುದು ಕಡ್ಡಾಯವಾಗಿರುತ್ತದೆ.

3.4. **ವಯೋಮಿತಿ:**

ಕರ್ನಾಟಕ ನಾಗರೀಕ ಸೇವಾ ನಿಯಮಗಳು (ಸಾಮಾನ್ಯ ನೇಮಕಾತಿ) 1977 ರ ನಿಯಮ 6 ರಂತೆ ಅರ್ಜಿ ಸಲ್ಲಿಸಲು ನೇಮಕಾತಿ ಬಗ್ಗೆ ಹೊರಡಿಸಿರುವ ಅಧಿಸೂಚನೆ ದಿನಾಂಕದಂದು ಅಭ್ಯರ್ಥಿಗೆ ಕನಿಷ್ಠ 18 ವರ್ಷ ವಯಸ್ಸಾಗಿರಬೇಕು ಮತ್ತು ಈ ಕೆಳಕಂಡಂತೆ ಗರಿಷ್ಠ ವಯೋಮಿತಿ ಮೀರಿರಬಾರದು.

ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಪ್ರವರ್ಗ– 1	ಗರಿಷ್ಟ ವಯೋಮಿತಿ 40 ವರ್ಷಗಳು
ಇತರ ಪ್ರವರ್ಗಗಳು ಅಂದರೆ 2(ಎ) ಅಥವಾ 2(ಬಿ) ಅಥವಾ 3(ಎ) ಅಥವಾ 3(ಬಿ)	ಗರಿಷ್ಟ ವಯೋಮಿತಿ 38 ವರ್ಷಗಳು
ಇತರೆ ಅಭ್ಯರ್ಥಿಗಳಿಗೆ	ಗರಿಷ್ಟ ವಯೋಮಿತಿ 35 ವರ್ಷಗಳು

4. **ಅರ್ಜಿ ನಮೂನೆ:**

ಈ ಅಧಿಸೂಚನೆಯೊಂದಿಗೆ ಪ್ರಕಟಿಸಿರುವ ಅರ್ಜಿ ನಮೂನೆಯಲ್ಲಿ ಮಾತ್ರ ಅಭ್ಯರ್ಥಿಗಳು ಅರ್ಜಿಯನ್ನು ಬೆರಳಚ್ಚು / ಕಂಪ್ಯೂಟರ್ ಪ್ರಿಂಟ್ ಮಾಡಿಸಿ, ಭರ್ತಿ ಮಾಡಿ ಅಭ್ಯರ್ಥಿಯ ಸಹಿ ಸಲ್ಲಿಸಿ, ಅರ್ಜಿಯನ್ನು ಸಲ್ಲಿಸತಕ್ಕದ್ದು.

ಮೂಲ ದಾಖಲೆಗಳ ಪರಿಶೀಲನೆ ವೇಳೆ ಈ ಕೆಳಕಂಡ ಮೂಲ ದಾಖಲೆಗಳನ್ನು ಪರಿಶೀಲನೆಗೆ ಒಳಪಡಿಸುವುದು.

1. ಆನೆ ನಿರ್ವಹಣೆಯಲ್ಲಿ ಅನುಭವ ಹೊಂದಿರುವ ಬಗ್ಗೆ ವಲಯ ಅರಣ್ಯಾಧಿಕಾರಿ ಅಥವಾ ಅವರಿಗಿಂತ ಮೇಲ್ಪಟ್ಟ ಅಧಿಕಾರಿಗಳಿಂದ ಪಡೆದ ಪ್ರಮಾಣ ಪತ್ರ
2. ಕರ್ನಾಟಕ ರಾಜ್ಯ ವ್ಯಾಪ್ತಿಯ ಅಧಿಸೂಚಿತ ಅರಣ್ಯದೊಳಗೆ ಪ್ರಸ್ತುತವಾಸ ಮಾಡುತ್ತಿದ್ದಾರೆ ಎಂಬ ಬಗ್ಗೆ ಸಂಬಂಧಿಸಿದ ತಹಶೀಲ್ದಾರ್‌ರಿಂದ । ಪಡೆದ ಪತ್ರ
3. ಜನ್ಮ ದಿನಾಂಕದ ದೃಢೀಕರಣ ಪತ್ರ
4. ಜಾತಿ ಪ್ರಮಾಣ ಪತ್ರ

4.1. **ಅರ್ಜಿಗಳನ್ನು ಸಲ್ಲಿಸಬೇಕಾದ ವಿಳಾಸ:**

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ

ಶಿವಮೊಗ್ಗ ವೃತ್ತ, ಶಿವಮೊಗ್ಗ

4.2. **ಸ್ವೀಕೃತ ಅರ್ಜಿಗಳ ಪರಾಮರ್ಶೆ / ನೇಮಕಾತಿ ವಿಧಾನ:**

ಅರ್ಜಿ ಸ್ವೀಕರಿಸಿದ ನಂತರ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಸಮಿತಿಯ ಮುಂದೆ ಹಾಜರಾಗಲು ತಿಳಿಸಲಾಗುವುದು. ಅಭ್ಯರ್ಥಿಗಳಿಂದ ಆನೆಯ ನಿರ್ವಹಣೆಯ ಸಾಮರ್ಥ್ಯ ಮತ್ತು ಕನ್ನಡ ಭಾಷೆಯನ್ನು ಮಾತನಾಡುವ ಮತ್ತು ತಿಳಿದುಕೊಳ್ಳುವ ಸಾಮರ್ಥ್ಯಕ್ಕನುಗುಣವಾಗಿ ಆಯ್ಕೆ ಸಮಿತಿಯು (ಗರಿಷ್ಠ 100 ಅಂಕಗಳಿಗೆ) ಅಂಕಗಳನ್ನು ನೀಡಿ ಹಾಗೂ ಮೀಸಲಾತಿ ನಿಯಮಗಳನ್ನನುಸರಿಸಿ ಆಯ್ಕೆ ಪಟ್ಟಿಯನ್ನು ಸಿದ್ದಗೊಳಿಸಲಾಗುವುದು.

4.3. **ಅಭ್ಯರ್ಥಿಗಳು ಸಂದರ್ಶನಕ್ಕೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗಬೇಕು.**

4.4. **ಆಯ್ಕೆಯಾದ ಅಭ್ಯರ್ಥಿಗಳ ಖಾಯಂ ಪೂರ್ವ / ಪರೀಕ್ಷಾರ್ಥಅವಧಿ ಹಾಗೂ ನಿಯುಕ್ತಿ:**

ಆಯ್ಕೆಯಾದ ಅಭ್ಯರ್ಥಿಗಳು 24 ತಿಂಗಳುಗಳು ಖಾಯಂ ಪೂರ್ವ / ಪರೀಕ್ಷಾರ್ಥ ಅವಧಿಯನ್ನು ತೃಪ್ತಿಕರವಾಗಿ ಪೂರೈಸತಕ್ಕದ್ದು. ಆಯ್ಕೆಯಾದ ಅಭ್ಯರ್ಥಿಯು ಪ್ರಪ್ರಥಮವಾಗಿ ಅವರನ್ನು ನೇಮಕ ಮಾಡುವ ಸ್ಥಳದಲ್ಲಿ ಕನಿಷ್ಠ 5 ವರ್ಷಗಳ ಸೇವೆಯನ್ನು ಪೂರೈಸತಕ್ಕದ್ದು.

5. **ಮೂಲ ದಾಖಲಾತಿಗಳ ಪರಿಶೀಲನೆ:**

5.1. ಮೀಸಲಾತಿ ವರ್ಗೀಕರಣ ಹಾಗೂ ಇತರೆ ಮೂಲ ಪ್ರಮಾಣ ಪತ್ರಗಳನ್ನು ಸಂದರ್ಶನಕ್ಕೆ ಹಾಜರಾಗುವ ಸಂಬಂಧಿಸಿದ ಆಯ್ಕೆ ಸಮಿತಿಯ ಎದುರು ಹಾಜರುಪಡಿಸಬೇಕು.

ಅರ್ಹ ಅಭ್ಯರ್ಥಿಗಳು ಮೂಲ ದಾಖಲಾತಿಗಳ ಪರಿಶೀಲನಾ ಸಂದರ್ಭದಲ್ಲಿ ಅರ್ಜಿಯಲ್ಲಿ ನಮೂದಿಸಿರುವ ಎಲ್ಲಾ ಮಾಹಿತಿಗಳಿಗೆ ಪೂರಕವಾಗಿ ವಯಸ್ಸು, (ಜನ್ಮ ದಿನಾಂಕ ತಿಳಿಯಲು ಪ್ರಮಾಣ ಪತ್ರಗಳನ್ನು) ಮೀಸಲಾತಿ ವರ್ಗೀಕರಣ, ಇತ್ಯಾದಿ ದಾಖಲಾತಿ / ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ನಿಗದಿಪಡಿಸಲಾಗುವ ದಿನಾಂಕ ಮತ್ತು ಅಧಿಕಾರಿಗಳ ಎದುರು ತಪ್ಪದೇ ಹಾಜರುಪಡಿಸಬೇಕು ಹಾಗೂ ಇಂತಹ ದಾಖಲೆಗಳನ್ನು ಹಾಜರುಪಡಿಸಲು ಕಾಲ ವಿಸ್ತರಣೆ ನೀಡಲಾಗುವುದಿಲ್ಲ.

5.2. ವಿವಿಧ ಪ್ರವರ್ಗಗಳ ಅಡಿಯಲ್ಲಿ ಮೀಸಲಾತಿ ಕೋರಿದ ಅಭ್ಯರ್ಥಿಗಳು, ಮೂಲ ದಾಖಲೆಗಳ ಪರಿಶೀಲನೆಯ ಸಮಯದಲ್ಲಿ ಹಾಜರುಪಡಿಸಬೇಕಾದ ಪ್ರಮಾಣ ಪತ್ರಗಳನ್ನು ಹಾಜರುಪಡಿಸದೇ ಇದ್ದ ಪಕ್ಷದಲ್ಲಿ ಅವರು ಕೋರಿರುವ ಮೀಸಲಾತಿಯನ್ನು ರದ್ದುಪಡಿಸಿ, ಸಾಮಾನ್ಯ ಅರ್ಹತೆಯ ಅಭ್ಯರ್ಥಿಯೆಂದು ಅವರನ್ನು ಪರಿಗಣಿಸಲಾಗುವುದು.

5.3. **ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿದ ಅಭ್ಯರ್ಥಿಗಳು ಸಲ್ಲಿಸಬೇಕಾದ ಪ್ರಮಾಣ ಪತ್ರಗಳ ವಿವರ:**

ವಿವಿಧ ಪ್ರವರ್ಗಗಳ ಅಡಿ ಮೀಸಲಾತಿ ಕೋರಿ ಅರ್ಜಿ ಸಲ್ಲಿಸುವವರು ಜಾತಿ ಪ್ರಮಾಣ ಪತ್ರವನ್ನು ಈ ಕೆಳಕಂಡ ನಮೂನೆಗಳಲ್ಲಿ ಹೊಂದಿರಬೇಕು.

5.3.1. ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರ **"ನಮೂನೆ – ಡಿ"** ರಲ್ಲಿ

5.3.2. ಪ್ರವರ್ಗ-I ರ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರ **"ನಮೂನೆ – ಇ"** ರಲ್ಲಿ

5.3.3. ಪ್ರವರ್ಗ–II (ಎ), II (ಬಿ), III (ಎ) ಮತ್ತು III (ಬಿ) ರ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರವರಿಂದ ನೀಡಲಾದ ಜಾತಿ ಪ್ರಮಾಣ ಪತ್ರ **"ನಮೂನೆ –ಎಫ್"** ರಲ್ಲಿ

ಸೂಚನೆ: "ನಮೂನೆ–ಎಫ್**"** ಪ್ರಮಾಣ ಪತ್ರವು ಅಧಿಸೂಚನೆಯ ದಿನಾಂಕಕ್ಕೆ ಐದು ವರ್ಷಕ್ಕಿಂತ ಹೆಚ್ಚು ಹಳೆಯ ಸಮಯದ್ದಾಗಿರಬಾರದು ಎಂಬುದನ್ನು ಅಭ್ಯರ್ಥಿಯು ಗಮನದಲ್ಲಿಡತಕ್ಕದ್ದು. ಅವಧಿ ಮೀರಿದ ಪ್ರಮಾಣ ಪತ್ರವನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ.

5.3.4. ಯೋಜನಾ ನಿರಾಶ್ರಿತ ಮೀಸಲಾತಿ ವರ್ಗೀಕರಣದಲ್ಲಿ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಸಂಬಂಧಪಟ್ಟ ತಹಶೀಲ್ದಾರ್‌ರಿಂದ ನಮೂನೆ – 3 ರಲ್ಲಿ ನೀಡಿರುವ ಪ್ರಮಾಣ ಪತ್ರವನ್ನು ಹಾಜರುಪಡಿಸಬೇಕು.

6. ಗಮನಿಸಬೇಕಾದ ಅಂಶಗಳು:

6.1. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:09.09.2016 ರ ನಂತರ ಬಂದ ಅರ್ಜಿಗಳನ್ನು ಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ ಹಾಗೂ ಅರ್ಜಿಗಳು ಮೇಲೆ ತಿಳಿಸಿರುವ ವಿಳಾಸಕ್ಕೆ ತಲುಪಲು ವಿಳಂಬವಾದರೆ ಇಲಾಖೆಯು ಜವಾಬ್ದಾರಿಯಲ್ಲ.

6.2. ನಿಗಧಿತ ನಮೂನೆಯಲ್ಲಿಲ್ಲದ ಅಥವಾ ಅಪೂರ್ಣ ಮಾಹಿತಿ ನೀಡಿದ ಅರ್ಜಿಗಳನ್ನು ಅನರ್ಹ ಅರ್ಜಿಗಳೆಂದು ಪರಿಗಣಿಸಿ ತಿರಸ್ಕರಿಸಲಾಗುವುದು. ಅಭ್ಯರ್ಥಿಯು ಅರ್ಜಿಯಲ್ಲಿ ಮಾಹಿತಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿಯು ತಿರಸ್ಕೃತವಾದ ಪಕ್ಷದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ವಂಚಿತರಾದ ಪಕ್ಷದಲ್ಲಿ ತತ್ಸಂಬಂಧ ಯಾವುದೇ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

6.3. ಯಾವುದೇ ಅಭ್ಯರ್ಥಿಯು ತನ್ನ ಆಯ್ಕೆಗೆ ಸಂಬಂಧಿಸಿದಂತೆ ಬಾಹ್ಯ ಒತ್ತಡ ತರಲು ಪ್ರಯತ್ನಿಸಿದ್ದಲ್ಲಿ, ಅಂತಹ ಅಭ್ಯರ್ಥಿಯನ್ನು ಅನರ್ಹಗೊಳಿಸಲಾಗುವುದು.

6.4. ಅಭ್ಯರ್ಥಿಯು ಒಂದೇ ಹುದ್ದೆಗೆ ಒಂದಕ್ಕಿಂತ ಹೆಚ್ಚಿನ ಅರ್ಜಿ ಭರ್ತಿ ಮಾಡಿ ಬೇರೆ ಬೇರೆ ಅರ್ಜಿಗಳಲ್ಲಿ ವಿಭಿನ್ನವಾದ ವಿವರಗಳನ್ನು ನಮೂದಿಸಿದ್ದಲ್ಲಿ, ಅಂತಹ ಅಭ್ಯರ್ಥಿಯ ಎಲ್ಲಾ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

6.5. ಕರ್ನಾಟಕ ರಾಜ್ಯದ ಯಾವುದೇ ಸರ್ಕಾರಿ ಇಲಾಖೆ, ಕೇಂದ್ರ ಸರ್ಕಾರಿ ಇಲಾಖೆ ಅಥವಾ ಅರೆ ಸರ್ಕಾರಿ ಸ್ವಾಮ್ಯದ ಸಂಸ್ಥೆಯ ಸೇವೆಯಿಂದ ವಜಾಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

6.6. ಕಾನೂನು ಬಾಹಿರನೆಂದು ಸಂಸ್ಥೆ ಅಥವಾ ಸಂಘ ಘೋಷಿಸಲಾದ ಸದಸ್ಯರಾಗಿದ್ದರೆ ಅಥವಾ ಇನ್ನಾವುದೇ ರೀತಿಯಲ್ಲಿ ಅಂತಹ ಸಂಘ ಸಂಸ್ಥೆಗಳೊಂದಿಗೆ ನಿಕಟ ಸಂಪರ್ಕ ಹೊಂದಿದ್ದರೆ, ಅಂತಹ ವ್ಯಕ್ತಿ ನೇಮಕಾತಿಗೆ ಅರ್ಹರಾಗುವುದಿಲ್ಲ.

6.7. ಅಭ್ಯರ್ಥಿಯು ಸಮಾಜಘಾತುಕ ಕೃತ್ಯಗಳಲ್ಲಿ ತೊಡಗಿ ಅಪರಾಧಿಯಾಗಿದ್ದರೆ, ಅಂತಹ ಅಭ್ಯರ್ಥಿಗಳು ನೇಮಕಾತಿಗೆ ಅರ್ಹರಾಗುವುದಿಲ್ಲ.

6.8. ಒಬ್ಬರಿಗಿಂತ ಹೆಚ್ಚು ಜೀವಂತ ಪತ್ನಿ / ಪತಿಯರನ್ನು ಹೊಂದಿದ ಪುರುಷ / ಮಹಿಳೆ ಅಭ್ಯರ್ಥಿಗಳು ಸರ್ಕಾರದ ಪೂರ್ವಾನುಮತಿ ಇಲ್ಲದೆ ನೇಮಕಾತಿಗೆ ಅರ್ಹರಾಗಿರುವುದಿಲ್ಲ.

6.9. ಅಭ್ಯರ್ಥಿಯು ನೇಮಕಾತಿ ಸಂದರ್ಶನಕ್ಕೆ ಬೇರೊಬ್ಬ ವ್ಯಕ್ತಿಯನ್ನು ತಮ್ಮ ಪರವಾಗಿ ಕಳುಹಿಸಿದ್ದಲ್ಲಿ ಅಥವಾ ತಪ್ಪು ಮಾಹಿತಿಗಳನ್ನು ನಮೂದಿಸಿದ್ದಲ್ಲಿ ಅಥವಾ ಕೃತ್ರಿಮ ಅಥವಾ ತಿದ್ದಿದ ದಾಖಲಾತಿಗಳನ್ನು ಅಥವಾ ಅಸತ್ಯ ವಿವರಗಳನ್ನು ನೀಡಿದಲ್ಲಿ ಅಥವಾ ಸತ್ಯ ವಿಷಯಗಳನ್ನು ಮರೆ ಮಾಚಿದ ಅಥವಾ ಅನುಚಿತ ಮಾರ್ಗಗಳನ್ನು ಉಪಯೋಗಿಸಿದಲ್ಲಿ ಅಥವಾ ಪ್ರಯತ್ನಿಸಿದಲ್ಲಿ ಅನರ್ಹರೆಂದು ಪರಿಗಣಿಸಲಾಗುವುದು ಮತ್ತು ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು 1977 ರ ಉಪ ನಿಯಮ 20 ರಂತೆ ಅಪರಾಧಿ ವ್ಯವಹರಣೆಗೆ ಒಳಪಡುವರು.

6.10. ಸರ್ಕಾರಿ ಆದೇಶ ಸಂಖ್ಯೆ: ಎಫ್‌ಡಿ–ಎಸ್‌ಪಿಎಸ್–04–ಪಿಇಟಿ–2005 ದಿನಾಂಕ: 31.03.2006 ರಂತೆ ಅಂಶದಾಯಿ ನಿವೃತ್ತಿ ಯೋಜನೆ (Contributory Pension Scheme) ಗೆ ಆಯ್ಕೆಯಾದ ಅಭ್ಯರ್ಥಿಗಳು ಬದ್ಧರಾಗಿರುತ್ತಾರೆ.

6.11. ಅಭ್ಯರ್ಥಿಗಳು ತಮ್ಮ ಮಾಹಿತಿಗಾಗಿ ಭರ್ತಿ ಮಾಡಿ ಸಲ್ಲಿಸಿದ ಅರ್ಜಿಯ ಒಂದು ಜೆರಾಕ್ಸ್ ಪ್ರತಿಯನ್ನು ತಮ್ಮೊಂದಿಗೆ ತಪ್ಪದೆ ಇಟ್ಟುಕೊಳ್ಳಲು ಸೂಚಿಸಿದೆ.

6.12. ಪ್ರಕಟಿಸಲಾಗಿರುವ ಹುದ್ದೆಗಳ ಸಂಖ್ಯೆಯಲ್ಲಿ ಕಡಿತ ಅಥವಾ ಹೆಚ್ಚುವರಿ ಆದಲ್ಲಿ, ಅದನ್ನು ಇಲಾಖಾ ವೆಬ್‌ಸೈಟ್ (www.kfdrecruitment.in) ನಲ್ಲಿ ಪ್ರಕಟಿಸಲಾಗುವುದು.

6.13. ಯಾವುದೇ ತಿಳುವಳಿಕೆ ದೊರೆಯದ ಅಭ್ಯರ್ಥಿಗಳು ನೇಮಕಾತಿಗೆ ಆಯ್ಕೆಯಾಗುವುದಿಲ್ಲವೆಂದು ತಿಳಿಯುವುದು.

6.14. ಆಯ್ಕೆಗೊಂಡು ನೇಮಕಾತಿ ಹೊಂದುವ ಅಭ್ಯರ್ಥಿಗಳು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಎಲ್ಲಾ ಸೇವಾ ನಿಯಮಗಳಿಗೆ ಒಳಪಡುತ್ತಾರೆ.

ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ,
ಶಿವಮೊಗ್ಗ ವೃತ್ತ, ಶಿವಮೊಗ್ಗ.

ಆನೆ ಕವಾಡಿ ಹುದ್ದೆಗೆ ಅರ್ಜಿ

APPLICATION FORM FOR THE POST OF ELEPHANT KAVADI

ಪ್ರಕಟಣೆ ಸಂಖ್ಯೆ: ಎ1/ಸಿಬ್ಬಂದಿ/ಆನೆಕವಾಡಿ–ನೇನೇ–ಸಿಆರ್–15/2016–17, ದಿನಾಂಕ: 22–08–2016

ಕನ್ನಡ ಅಥವಾ ಆಂಗ್ಲ ಭಾಷೆಯ ಸ್ಪಷ್ಟ ಅಕ್ಷರಗಳಲ್ಲಿ ಭರ್ತಿ ಮಾಡಿ
Fill Legibly in English (Capitals) or Kannada letters only

ಯಾವುದೇ ಅರ್ಜಿ ಶುಲ್ಕ ಇರುವುದಿಲ್ಲ. There is no Application Fee.
ಯಾವುದೇ ಪ್ರಮಾಣ ಪತ್ರ ಲಗತ್ತಿಸುವಂತಿಲ್ಲ. No document to be enclosed.

ಇತ್ತೀಚಿನ ಪಾಸ್ಪೋರ್ಟ್ ಅಳತೆಯ ಭಾವಚಿತ್ರ ಅಂಟಿಸಿ

Affix Recent Passport Size Photograph

1. ಅಭ್ಯರ್ಥಿಯ ಹೆಸರು
   Name of the Candidate

2. ಲಿಂಗ/ Sex — ☐ ಪುರುಷ Male — ☐ ಮಹಿಳೆ Female

3. ಜನ್ಮ ದಿನಾಂಕ/Date of Birth — ದಿನ / Day ☐☐ ತಿಂಗಳು/ Month ☐☐ ವರ್ಷ/ Year ☐☐☐☐

4. ಪತ್ರ ವ್ಯವಹಾರಕ್ಕಾಗಿ ಪೂರ್ಣ ವಿಳಾಸ ಹಾಗೂ ಮೊಬೈಲ್ ಸಂಖ್ಯೆ
   Address for Correspondence
   Mobile Number

   ಪಿನ್ ಕೋಡ್/ PIN CODE ☐☐☐☐☐☐

5. ವರ್ಗೀಕರಣ (ಅ)/ Classification (A)

ಸೂಕ್ತ ಅಂಕಣವನ್ನು (√) ಟಿಕ್ ಮಾಡಿ

☐ ಸಾಮಾನ್ಯ ವರ್ಗ General Merit	☐ ಪ್ರವರ್ಗ– I Category –I	☐ ಪ್ರವರ್ಗ–II(ಎ) Category–II(a)
☐ ಪ್ರವರ್ಗ–II(ಬಿ) Category–II(b)	☐ ಪ್ರವರ್ಗ– III(ಎ) Category–III(a)	☐ ಪ್ರವರ್ಗ–III(ಬಿ) Category–III(b)
☐ ಪರಿಶಿಷ್ಟ ಜಾತಿ SC	☐ ಪರಿಶಿಷ್ಟ ಪಂಗಡ ST	

6. ವರ್ಗೀಕರಣ (ಆ)/ Classification (B)
   ಸೂಕ್ತ ಅಂಕಣವನ್ನು (√)ಟಿಕ್ ಮಾಡಿ

☐ ಮಾಜಿ ಸೈನಿಕರು Ex-Serviceman	☐ ಯೋಜನೆ ನಿರಾಶ್ರಿತರೆ Project Displaced	☐ ಕನ್ನಡ ಮಾಧ್ಯಮ Kannada Medium
☐ ಮಹಿಳೆ Women	☐ ಗ್ರಾಮೀಣ Rural	

7. ಕರ್ನಾಟಕ ರಾಜ್ಯದ ವ್ಯಾಪ್ತಿಯ ಅಧಿಸೂಚಿತ ಅರಣ್ಯದೊಳಗೆ ವಾಸಿಸುವರಾಗಿರತಕ್ಕದ್ದು. (√) ಟಿಕ್ ಮಾಡಿ — ☐ ಹೌದು Yes ☐ ಇಲ್ಲ No

8. ಆನೆ ಸಾಕಣೆಯಲ್ಲಿ ಹೊಂದಿರುವ ಅನುಭವ (ವರ್ಷಗಳಲ್ಲಿ)
   No. of Years of Experience in handling Elephants ☐☐ ವರ್ಷಗಳು

ಮೇಲಿನ ಮಾಹಿತಿಗಳು ಸತ್ಯವಾಗಿವೆ ಎಂದು ಪ್ರಮಾಣ ಮಾಡುತ್ತೇನೆ.

Place / ಸ್ಥಳ: **ಅಭ್ಯರ್ಥಿಯ ಸಹಿ**

Date / ದಿನಾಂಕ: **Signature of the Candidate**

P.R. 132

S.C. - 20

ಪೊಲೀಸ್ ಇಲಾಖೆ

ಪೋಲಿಸ್ ತರಬೇತಿ ಶಾಲೆ

ಪೊಲೀಸ್ ತರಬೇತಿ ಶಾಲೆ, ಗಾಡೇನಹಳ್ಳಿ, ಶಾಂತಿಗ್ರಾಮ, ಹಾಸನ ಜಿಲ್ಲೆ ಇಲ್ಲಿನ ಅನುಯಾಯಿ ಹುದ್ದೆಗಳ ನೇಮಕಾತಿ

ಅಧಿಸೂಚನೆ

ಅಧಿಸೂಚನೆ ಸಂಖ್ಯೆ: ಪೊತಶಾ/(ಹಾ)/ಸಿಬ್ಬಂದಿ–1/24/2016–17, ದಿನಾಂಕ: 30.07.2016

ವಿಷಯ:– ಅನುಯಾಯಿ(ಪುರುಷ & ಮಹಿಳೆಯ) ಹುದ್ದೆಗಳ ನೇರ ನೇಮಕಾತಿ – 2016.

1. ಪೊಲೀಸ್ ತರಬೇತಿ ಶಾಲೆ, ಗಾಡೇನಹಳ್ಳಿ, ಶಾಂತಿಗ್ರಾಮ, ಹಾಸನ ಜಿಲ್ಲೆ. ಇಲ್ಲಿ ಖಾಲಿಯಿರುವ 21 ಅನುಯಾಯಿ ಹುದ್ದೆಗಳ ನೇಮಕಾತಿಗಾಗಿ ಕರ್ನಾಟಕ ರಾಜ್ಯ ಪೊಲೀಸ್ ಸೇವೆಗಳು, ಲಿಪಿಕ ವೃಂದ ಸೇರಿದಂತೆ (ನೇಮಕಾತಿ) ನಿಯಮಗಳು, 2004, ಕರ್ನಾಟಕ ನಾಗರಿಕ ಸೇವೆಗಳು. (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ಪ್ರಕಾರ ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ/140/ಇಎಫ್‌ಎಸ್/2014, ದಿನಾಂಕ:28.10.2015 & ಮಾನ್ಯ ಪೊಲೀಸ್ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು ರವರ ಆದೇಶ ಸಂಖ್ಯೆ: 39/ಸಿಬ್ಬಂದಿ–3/2014–15, ದಿನಾಂಕ 04–03–2016, ಮತ್ತು ಪೋಲಿಸ್ ಮಹಾ ನಿರ್ದೇಶಕರು, ತರಬೇತಿ, ಬೆಂಗಳೂರು ರವರ ಪತ್ರ ಸಂಖ್ಯೆ: ತ/ಸಿಬ್ಬಂದಿ–1/393/2015–16, ದಿನಾಂಕ:06.05.2016 ರಲ್ಲಿ ಅನುಮತಿಸಿರುವಂತೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.
2. ಅರ್ಜಿಗಳನ್ನು **ಎಸ್‌ಪಿ & ಪ್ರಭಾರ ಪ್ರಾಂಶುಪಾಲರು, ಪೊಲೀಸ್ ತರಬೇತಿ ಶಾಲೆ, ಗಾಡೇನಹಳ್ಳಿ, ಶಾಂತಿಗ್ರಾಮ (ಹೋಬಳಿ), ಹಾಸನ ಜಿಲ್ಲೆ, ಪಿನ್.ನಂ–573220** ರವರ ಕಛೇರಿಗೆ ಖುದ್ದಾಗಿ ಅಥವಾ ಅಂಚೆ ಮೂಲಕ ಸಲ್ಲಿಸಲು ತಿಳಿಸಲಾಗಿದೆ.
3. **ಅರ್ಜಿ ಶುಲ್ಕ:–**

ಸಾಮಾನ್ಯ ವರ್ಗ, 2(ಎ), 2(ಬಿ), 3(ಎ), 3(ಬಿ) ಗೆ ಸೇರಿದ ಅಭ್ಯರ್ಥಿಗಳಿಗೆ	₹ 250.00
ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1ಕ್ಕೆ ಸೇರಿದ ಅಭ್ಯರ್ಥಿಗಳಿಗೆ	₹ 100.00

ನಿಗಧಿತ ಶುಲ್ಕಕ್ಕೆ **ಸ್ಟೇಟ್ ಬ್ಯಾಂಕ್ ಆಫ್ ಮೈಸೂರು, ಬ್ಯಾಂಕಿನ** ಅಧಿಕೃತ ಶಾಖೆಗಳಿಂದ ಡಿ.ಡಿ.ಯನ್ನು **Principal, Police Training School, Hassan** ರವರ ಹೆಸರಿನಲ್ಲಿ ಪಡೆದು ಅರ್ಜಿಯೊಂದಿಗೆ ಲಗತ್ತಿಸಿ ಸಲ್ಲಿಸುವುದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿಯೂ ಹಿಂದಿರುಗಿಸಲಾಗುವುದಿಲ್ಲ ಅಥವಾ ಅದನ್ನು ಇತರೆ ಯಾವುದೇ ಪರೀಕ್ಷೆ/ ನೇಮಕಾತಿಗಳಿಗೆ ಹೊಂದಿಸಿಕೊಳ್ಳಲಾಗುವುದಿಲ್ಲ.

4. **ಅರ್ಜಿ ಸಲ್ಲಿಸುವ ವಿಧಾನ ಹಾಗೂ ದಿನಾಂಕ:**

ನಿಗಧಿತ ನಮೂನೆಯ ಅರ್ಜಿ ಹಾಗೂ ಮಾಹಿತಿ/ ಸೂಚನೆಗಳನ್ನು ಇಲಾಖೆಯ ಅಧಿಕೃತ ವೆಬ್‌ಸೈಟ್ www.ksp.gov.in ನಲ್ಲಿ ಪ್ರಕಟಿಸಲಾಗಿದೆ ಹಾಗೂ ಪೊಲೀಸ್ ತರಬೇತಿ ಶಾಲೆ, ಹಾಸನ ಮತ್ತು ಜಿಲ್ಲಾ ಪೊಲೀಸ್ ಕಛೇರಿ, ಹಾಸನದ ಸೂಚನಾ ಫಲಕದಲ್ಲೂ ಪ್ರಕಟಿಸಲಾಗಿರುತ್ತದೆ. ಅರ್ಜಿಯ ನಮೂನೆಯನ್ನು ಅಭ್ಯರ್ಥಿಗಳು ತಮ್ಮ ವೈಯಕ್ತಿಕ ಖರ್ಚಿನಲ್ಲಿ ಬೆರಳಚ್ಚು ಮಾಡಿಸಿ, ಪಾಸ್‌ಪೋರ್ಟ್ ಅಳತೆಯ 2 ಬಣ್ಣದ ಭಾವಚಿತ್ರ ಹಾಗೂ ಭಾವಚಿತ್ರದ ಮೇಲೆ ಸಹಿಯೊಂದಿಗೆ ಅರ್ಜಿಯಲ್ಲಿರುವ ಎಲ್ಲಾ ವಿವರಗಳನ್ನು ಸಮರ್ಪಕವಾಗಿ ಭರ್ತಿಮಾಡಿ, ಪೊಲೀಸ್ ತರಬೇತಿ ಶಾಲೆ, ಗಾಡೇನಹಳ್ಳಿ, ಶಾಂತಿಗ್ರಾಮ, ಹಾಸನ ಕಛೇರಿಗೆ ಸಲ್ಲಿಸುವುದು.

- **ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 16.08.2016 ಬೆಳಿಗ್ಗೆ 10 ಗಂಟೆಯಿಂದ,**
- **ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 14.09.2016 ಸಂಜೆ 06 ಗಂಟೆಯವರೆಗೆ.**

ಸೂಚನೆ: –

- ನಿಗಧಿತ ದಿನಾಂಕ ಹಾಗೂ ಸಮಯದೊಳಗೆ ಸಲ್ಲಿಸಲಾಗುವ ಅರ್ಜಿಗಳನ್ನು ಮಾತ್ರ ಪರಿಗಣಿಸಲಾಗುವುದು.
- ಈಗಾಗಲೇ ದಿನಾಂಕ: 04.07.2016ರಂದು ಹೊರಡಿಸಲಾಗಿದ್ದ ಅಧಿಸೂಚನೆಯಲ್ಲಿ ನಿಗಧಿಪಡಿಸಲಾಗಿದ್ದ ದಿನಾಂಕಗಳಂದು ಸ್ವೀಕೃತವಾಗುವ ಅರ್ಜಿಗಳನ್ನೂ ಸಹ ಪರಿಗಣಿಸಲಾಗುವುದು.
- ಅಂಚೆ ಮೂಲಕ ಸಲ್ಲಿಸುವ ಅರ್ಜಿಗಳು ನಿಗಧಿಪಡಿಸುವ ಕೊನೆಯ ದಿನಾಂಕದೊಳಗೆ ಈ ಕಛೇರಿಗೆ ತಲುಪದಿದ್ದಲ್ಲಿ ಅಂತಹ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲವೆಂದು ತಿಳಿಸಲಾಗಿದೆ.

5. **ಅನುಯಾಯಿ (ಪುರುಷ & ಮಹಿಳೆ) ಖಾಲಿ ಹುದ್ದೆಗಳ ವರ್ಗೀಕರಣ :–**

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಮಹಿಳಾ ಅಭ್ಯರ್ಥಿ	ಗ್ರಾಮೀಣಾ ಅಭ್ಯರ್ಥಿ	ಮಾಜಿ ಸೈನಿಕರು	ಯೋಜನೆಗಳಿಂದ ನಿರಾಶ್ರಿತರಾದ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರೆ
ಸಾಮಾನ್ಯ ವರ್ಗ	10	3	3	1	–	–	3
ಪರಿಶಿಷ್ಟ ಜಾತಿ	3	1	1	–	–	–	1

ವರ್ಗ	ಒಟ್ಟು ಹುದ್ದೆಗಳ ಸಂಖ್ಯೆ	ಮಹಿಳಾ ಅಭ್ಯರ್ಥಿ	ಗ್ರಾಮೀಣಾ ಅಭ್ಯರ್ಥಿ	ಮಾಜಿ ಸೈನಿಕರು	ಯೋಜನೆಗಳಿಂದ ನಿರಾಶ್ರಿತರಾದ ಅಭ್ಯರ್ಥಿ	ಕನ್ನಡ ಮಾಧ್ಯಮ	ಇತರೆ
ಪರಿಶಿಷ್ಠ ಪಂಗಡ	1	–	–	–	–	–	1
ಪ್ರವರ್ಗ–1	1	–	–	–	–	–	1
ಪ್ರವರ್ಗ–2ಎ	3	1	1	–	–	–	1
ಪ್ರವರ್ಗ–2ಬಿ	1	–	–	–	–	–	1
ಪ್ರವರ್ಗ–3ಎ	1	–	–	–	–	–	1
ಪ್ರವರ್ಗ –3ಬಿ	1	–	–	–	–	–	1
ಒಟ್ಟು	**21**	**5**	**5**	**1**	**–**	**–**	**10**

ವೃತ್ತಿವಾರು ಖಾಲಿಯಿರುವ ಹುದ್ದೆಗಳ ವಿವರ:–

ಕ್ರ.ಸಂ.	ಅನುಯಾಯಿಯ ಹುದ್ದೆ	ಒಟ್ಟು ಸಂಖ್ಯೆ
1.	ಡ್ರೈ ಸ್ವೀಪರ್	02
2.	ವೆಟ್ ಸ್ವೀಪರ್	03
3.	ಕುಕ್ (ಸಸ್ಯಹಾರಿ ಮತ್ತು ಮಾಂಸಹಾರಿ)	05
4.	ದೋಬಿ	02
5.	ಬಾರ್‌ಬರ್	02
6.	ತೋಟಮಾಲಿ (Gardner)	02
7.	ದರ್ಜಿ (Tailor)	01
8.	ಎಲೆಕ್ಟ್ರೀಷಿಯನ್	01
9.	ಪ್ಲಂಬರ್	01
10.	ಕಾರ್ಪೆಂಟರ್	01
11.	ಗಾರೆಕೆಲಸ	01
ಒಟ್ಟು		**21**

❖ ಮೇಲೆ ನಮೂದಿಸಿರುವ ಖಾಲಿ ಹುದ್ದೆಗಳ ಸಂಖ್ಯೆ ತಾತ್ಕಾಲಿಕವಾಗಿದ್ದು, ಅವಶ್ಯಕತೆ ಹಾಗೂ ಸಂದರ್ಭಕ್ಕೆ ಅನುಗುಣವಾಗಿ ಮಾರ್ಪಾಡು ಮಾಡಲಾಗುವುದು.

ಟಿಪ್ಪಣಿ:

1. ಮಾಜಿ ಸೈನಿಕರು, ಗ್ರಾಮೀಣಾ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ, ಅಂತಹ ಖಾಲಿ ಹುದ್ದೆಗಳನ್ನು ಮೇಲೆ ನಮೂದಿಸಿರುವ ಪ್ರವರ್ಗದ ಇತರರು, ಅಭ್ಯರ್ಥಿಗಳಿಂದ ತುಂಬಲಾಗುವುದು.

2. ಅನುಯಾಯಿ ಹುದ್ದೆಗಳಲ್ಲಿ ವೃತ್ತಿವಾರು ಖಾಲಿಯಿರುವ ಹುದ್ದೆಗಳನ್ನು ಭರ್ತಿಮಾಡುವಾಗ, ಮೇಲೆ ಅಧಿಸೂಚನೆ ಹೊರಡಿಸಿರುವ ಪ್ರವರ್ಗ–1, 2(ಎ), 2(ಬಿ), 3(ಎ) ಮತ್ತು 3(ಬಿ) ಅಭ್ಯರ್ಥಿಗಳು ಲಭ್ಯವಾಗದಿದ್ದಲ್ಲಿ, ಸದರಿ ಖಾಲಿ ಹುದ್ದೆಗಳನ್ನು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ/08/ಸೆಹಿಮ/95, ದಿನಾಂಕ:20.06.1995 ರನ್ವಯ ಸಾಮಾನ್ಯ ವರ್ಗದ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು ಮತ್ತು ನಷ್ಟಗೊಂಡ ರಿಕ್ತ ಸ್ಥಾನಗಳನ್ನು ಮುಂದಿನ ಕ್ಯಾಲೆಂಡರ್ ವರ್ಷ ಅಥವಾ ತದನಂತರದ ಎರಡು ಕ್ಯಾಲೆಂಡರ್ ವರ್ಷಗಳಲ್ಲಿ ನೇರ ನೇಮಕಾತಿಗಳಲ್ಲಿ ಸರಿದೂಗಿಸಿಕೊಳ್ಳಲಾಗುವುದು.

6. ಅರ್ಹತಾ ಷರತ್ತುಗಳು:–

I. ಭಾರತೀಯನಾಗಿರತಕ್ಕದ್ದು.

II. ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿ ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ, ಮಹಿಳಾ ಅಭ್ಯರ್ಥಿಯು ಸರ್ಕಾರದಿಂದ ಪೂರ್ವಾನುಮತಿಯನ್ನು ಪಡೆಯದೇ ನೇಮಕಾತಿಗೆ ಅರ್ಹರಾಗುವುದಿಲ್ಲ.

III. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತನಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.

7. **ವಯೋಮಿತಿ:–**

ಅರ್ಜಿಯನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಂದರೆ, ದಿನಾಂಕ: 14.09.2016ಕ್ಕೆ ಅಭ್ಯರ್ಥಿಗೆ ಕನಿಷ್ಠ 19 ವರ್ಷ ವಯಸ್ಸಾಗಿರಬೇಕು ಹಾಗೂ ಕೆಳಕಂಡ ವಯಸ್ಸು ಮೀರಿರಬಾರದು.

(ಎ) ಪರಿಶಿಷ್ಠ ಜಾತಿ, ಪರಿಶಿಷ್ಠ ಪಂಗಡ ಹಾಗೂ ಹಿಂದುಳಿದವರ್ಗಗಳಿಗೆ ಸೇರಿದ ಅಭ್ಯರ್ಥಿಗಳಿಗೆ 30 ವರ್ಷಗಳು.

(ಬಿ) ಇತರೆ ಅಭ್ಯರ್ಥಿಗಳಿಗೆ 25 ವರ್ಷಗಳು.

(ಸಿ) ಮಾಜಿ ಸೈನಿಕ ಅಭ್ಯರ್ಥಿಯು ಸೈನ್ಯ ವಿಯೋಜನೆ, ಸೇವೆಯಿಂದ ತೆಗೆದು ಹಾಕಿದ ಹಾಗೂ ಸೇವಾ ನಿವೃತ್ತಿ ಹೊಂದಿದ ಕಾರಣದಿಂದ ಬಿಡುಗಡೆಯಾದ, ಮಾಜಿ ಯೋಧರಾಗಿದ್ದಲ್ಲಿ "ಅವರು ಸಲ್ಲಿಸಿದ ಅವಧಿ"ಯ ಜೊತೆಗೆ ಹೆಚ್ಚುವರಿ 03 ವರ್ಷಗಳ ರಿಯಾಯಿತಿಯನ್ನು ನೀಡಲಾಗುವುದು. ಮಾಜಿ ಸೈನಿಕ ಅಭ್ಯರ್ಥಿಗಳು ಈ ಹಿಂದೆ ಮೀಸಲಾತಿ ಸೌಲಭ್ಯವನ್ನು ಪಡೆದು ಸರ್ಕಾರಿ ಹುದ್ದೆಗೆ ನೇಮಕಾತಿ ಆಗಿದಲ್ಲಿ ಈ ನಿಯಮಗಳಡಿ ಪುನಃ ಮೀಸಲಾತಿಗೆ ಅರ್ಹರಾಗುವುದಿಲ್ಲ. ಮಾಜಿ ಯೋದ ಎಂಬ ಶಬ್ದವು ಚಾಲ್ತಿಯಲ್ಲಿರುವ ಸಂಬಂಧಿಸಿದ ನಿಯಮಗಳಲ್ಲಿನ ಪರಿಭಾಷೆಯ ಅರ್ಥಹೊಂದಿದೆ.

8. ವಿದ್ಯಾರ್ಹತೆ:–

ಅನುಯಾಯಿ ಹುದ್ದೆಗೆ 7ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು. 7ನೇ ತರಗತಿಯ ವಿದ್ಯಾರ್ಹತೆಯನ್ನು ಅರ್ಜಿ ಸಲ್ಲಿಸಲು ನಿಗಧಿ ಪಡಿಸಿರುವ ಕೊನೆಯ ಅಂದರೆ ದಿನಾಂಕ: 14.09.2016ಕ್ಕೆ ಹೊಂದಿರಬೇಕು.

ಆದ್ಯತೆ (Preference) :

ಅರ್ಜಿದಾರರು ಅರ್ಜಿ ಸಲ್ಲಿಸುವ ಹುದ್ದೆಗೆ ಸಂಬಂಧಿಸಿದ ವೃತ್ತಿಪರ (Trade) ಶಿಕ್ಷಣದಲ್ಲಿ ನೈಪುಣ್ಯತೆ ಹೊಂದಿದವರಿಗೆ ಆದ್ಯತೆ ನೀಡಲಾಗುವುದು.

ಟಿಪ್ಪಣಿ:–

1. ನಿಗಧಿಪಡಿಸಿರುವ ವಿದ್ಯಾರ್ಹತೆಯನ್ನು ಹೊಂದದೆ ಇರುವ ಅಭ್ಯರ್ಥಿಗಳ ಅರ್ಜಿಯನ್ನು ತಿರಸ್ಕರಿಸಲಾಗುವುದು. ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದಂದು ನಿಗಧಿತ ವಿದ್ಯಾರ್ಹತೆ ಪಡೆಯಲು ಪರೀಕ್ಷೆ ಬರೆದು ಫಲಿತಾಂಶಕ್ಕಾಗಿ ಕಾಯುತ್ತಿರುವ ಅಭ್ಯರ್ಥಿಗಳು ಅರ್ಹರಾಗಿರುವುದಿಲ್ಲ.
2. ನಿಗಧಿತ ವಿದ್ಯಾರ್ಹತೆಯನ್ನು ಹೊರತುಪಡಿಸಿ, ಬೇರೆ ಯಾವ ವಿದ್ಯಾರ್ಹತೆಯನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿ ಸಲ್ಲಿಸಲು ನಿಗಧಿ ಪಡಿಸಿದ ಕೊನೆಯ ದಿನಾಂಕಕ್ಕೆ ಎಲ್ಲಾ ಅಭ್ಯರ್ಥಿಗಳು 7ನೇ ತರಗತಿ ಪರೀಕ್ಷೆಯಲ್ಲಿ ಉತ್ತೀರ್ಣ ಹೊಂದಿದ ಅಂಕಪಟ್ಟಿಯನ್ನು ಹೊಂದಿರಬೇಕು.

9. ಖಾಯಂ ಪೂರ್ವ ಅವಧಿ, ವೇತನ ಶ್ರೇಣಿ ಮತ್ತು ಪಿಂಚಣಿ ಸೌಲಭ್ಯ :

ಅ) ನೇಮಕಾತಿಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡ ದಿನಾಂಕದಿಂದ 2 ವರ್ಷದ ಖಾಯಂ ಪೂರ್ವ ಅವಧಿಯಲ್ಲಿರುತ್ತಾರೆ.

ಆ) ವೇತನ ಶ್ರೇಣಿ ₹ 10400–200–12000–250–13000–300–14200–350–15600–400–16400.

ಇ) ಪಿಂಚಣಿ ಸೌಲಭ್ಯ: ಸರ್ಕಾರದ ಆದೇಶ ಸಂಖ್ಯೆ:ಎಫ್‌ಡಿ(ಎಸ್‌ಪಿಎಲ್)/04/ಪಿಇಟಿ/2005, ದಿ: 31.03.2006 ರಂತೆ ನೂತನ ಅಂಶದಾಯಿ ಪಿಂಚಣಿ ಸೌಲಭ್ಯ ಅನ್ವಯವಾಗುವುದು.

10. ಆಯ್ಕೆ / ಲಿಖಿತ ಪರೀಕ್ಷೆ :

ಕರ್ನಾಟಕ ರಾಜ್ಯ ಪೊಲೀಸ್ ಸೇವೆಗಳು, ಲಿಪಿಕ ವೃಂದ ಸೇರಿದಂತೆ (ನೇಮಕಾತಿ) ನಿಯಮಗಳು, 2004ರ ಪ್ರಕಾರ ಅರ್ಜಿಸಲ್ಲಿಸಿದ್ದ ಅಭ್ಯರ್ಥಿಗಳಲ್ಲಿ, ಅರ್ಹ ಅಭ್ಯರ್ಥಿಗಳಿಗೆ ಕನ್ನಡದಲ್ಲಿ ಪ್ರಬಂಧವನ್ನೊಳಗೊಂಡ 50 ಅಂಕಗಳ ಲಿಖಿತ ಪರೀಕ್ಷೆಯನ್ನು ಪೊಲೀಸ್ ತರಬೇತಿ ಶಾಲೆ, ಗಾಡೇನಹಳ್ಳಿ, ಶಾಂತಿಗ್ರಾಮ, ಹಾಸನ ಕಛೇರಿಯಲ್ಲಿ ನಡೆಸಲಾಗುವುದು.

ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ಹಾಜರಾಗುವಾಗ ಈ ಕಛೇರಿಯಿಂದ ಕಳುಹಿಸಲಾದ ಕರೆಪತ್ರದ ಜೊತೆಗೆ ಕೆಳಕಂಡ ಯಾವುದಾದರೊಂದು ದೃಢೀಕೃತ ಗುರುತಿನ ಚೀಟಿಯನ್ನು ಕಡ್ಡಾಯವಾಗಿ ಹಾಜರುಪಡಿಸತಕ್ಕದ್ದು.

1. ಪಾಸ್‌ಪೋರ್ಟ್.
2. ಚಾಲನಾ ಪರವಾನಗಿ ಪತ್ರ.
3. ಪ್ಯಾನ್ ಕಾರ್ಡ್.
4. ರಾಜ್ಯ ಸರ್ಕಾರ/ಕೇಂದ್ರ ಸರ್ಕಾರ/ ಸಾರ್ವಜನಿಕ ಸ್ವಾಮ್ಯದ ಅಥವಾ ಸರ್ಕಾರದ ಅಧೀನಕ್ಕೊಳಪಟ್ಟ ಖಾಸಗಿ ಕಂಪನಿಗಳು ವಿತರಿಸಿರುವ ಭಾವಚಿತ್ರವಿರುವ ಸೇವಾ ಗುರುತಿನ ಚೀಟಿ.
5. ಬ್ಯಾಂಕ್ ಪಾಸ್ ಪುಸ್ತಕ.
6. ಭಾವಚಿತ್ರ ಸಮೇತ ನೋಂದಣಿಯಾಗಿರುವ ಸ್ವತ್ತಿನ ದಾಖಲೆ ಪತ್ರ ಅಥವಾ ಪಟ್ಟಾ ಪುಸ್ತಕ.
7. ಜಾತಿ ಪ್ರಮಾಣ ಪತ್ರ.

8. ಚುನಾವಣಾ ಆಯೋಗದ ಫೋಟೋ ಗುರುತಿನ ಚೀಟಿ.

9. ಆಧಾರ್ ಕಾರ್ಡ್.

ಲಿಖಿತ ಪರೀಕ್ಷೆಯ ಫಲಿತಾಂಶದ ಆಧಾರದ ಮೇಲೆ ಅಧಿಸೂಚನೆ ಹೊರಡಿಸಿರುವ ಹುದ್ದೆಗಳ ವರ್ಗೀಕರಣಕ್ಕೆ ಅನುಗುಣವಾಗಿ ಪ್ರತಿಯೊಂದು ಹುದ್ದೆಗೆ 1:5ರ ಅನುಪಾತದಲ್ಲಿ ಅರ್ಹ ಅಭ್ಯರ್ಥಿಗಳಿಗೆ ನೈಪುಣ್ಯತೆ ಪರೀಕ್ಷೆಯನ್ನು (Proficiency Test) 50 ಅಂಕಗಳಿಗೆ ಮಾಡಲಾಗುವುದು. ನಂತರ ಸದರಿ ಅಭ್ಯರ್ಥಿಗಳಿಗೆ ವೈದ್ಯಕೀಯ ಪರೀಕ್ಷೆ ಹಾಗೂ ಮೂಲ ದಾಖಲಾತಿಗಳ ಪರೀಕ್ಷೆ ನಡೆಸಲಾಗುವುದು. ಅಭ್ಯರ್ಥಿಗಳು ವೈದ್ಯಕೀಯ ಪರೀಕ್ಷೆಗೆ ನೇಮಕಾತಿ ಸಮಿತಿಯು ರಚಿಸುವ ವೈದ್ಯಕೀಯ ಮಂಡಳಿಯ ಮುಂದೆ ಹಾಜರಾಗತಕ್ಕದ್ದು, ಹಾಜರಾಗುವ ವೇಳೆ, ಸ್ಥಳ ಹಾಗೂ ವೈದ್ಯಕೀಯ ಪರೀಕ್ಷೆಯ ವಿವರಗಳನ್ನು ನೇಮಕಾತಿ ಪ್ರಾಧಿಕಾರವು ನಿಗಧಿಪಡಿಸುವುದು. ವೈದ್ಯಕೀಯ ಮಂಡಳಿಯು ದೈಹಿಕವಾಗಿ ಅರ್ಹರೆಂದು ಪ್ರಮಾಣೀಕರಿಸಿದ ಅಭ್ಯರ್ಥಿಗಳು ಮಾತ್ರ ನೇಮಕಾತಿಗೆ ಅರ್ಹರಾಗುವರು. ತದನಂತರ, ಲಿಖಿತ ಪರೀಕ್ಷೆ ಮತ್ತು ನೈಪುಣ್ಯತೆ ಪರೀಕ್ಷೆಗಳಲ್ಲಿ ಪಡೆದ ಅಂಕಗಳ ಮೆರಿಟ್ (Merit) ಆಧಾರದ ಮೇಲೆ ಅಧಿಸೂಚನೆ ಹೊರಡಿಸಿರುವ ಖಾಲಿ ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿಯನ್ನು ಪ್ರಕಟಿಸಲಾಗುವುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಮೊದಲು ಅಂಕಪಟ್ಟಿ ಪರಿಶೀಲನೆ, ಅಭ್ಯರ್ಥಿಗಳ ಗುಣ ಮತ್ತು ನಡತೆ ಹಾಗೂ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳ ಪರಿಶೀಲನೆಯನ್ನು ಸಂಬಂಧಪಟ್ಟ ಪ್ರಾಧಿಕಾರದಿಂದ ಮಾಡಿಸಿ, ನಂತರ ನಿಯಮಾನುಸಾರ ಅರ್ಹ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗುವುದು.

ನೇಮಕಾತಿಯಾದ ನಂತರ ಅಭ್ಯರ್ಥಿಗಳಿಗೆ ನೇಮಕಾತಿ ಪ್ರಾಧಿಕಾರವು ಅವರುಗಳು ಆಯ್ಕೆಯಾದ ವೃತ್ತಿಗನುಗುಣವಾಗಿ ಕರ್ತವ್ಯ ಹಂಚಿಕೆಯನ್ನು ಮಾಡಲಾಗುವುದು. ಅದರಂತೆ ಅಭ್ಯರ್ಥಿಗಳು ಕರ್ತವ್ಯ ನಿರ್ವಹಿಸುವುದು. ತಪ್ಪಿದಲ್ಲಿ ನೇಮಕಾತಿ ಆದೇಶವನ್ನು ರದ್ದುಪಡಿಸಲಾಗುವುದು.

11. ಜಾತಿ ಮೀಸಲಾತಿ ಪ್ರಮಾಣ ಪತ್ರಗಳು :

ಜಾತಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಕೆಳಕಂಡ ನಮೂನೆಗಳಲ್ಲಿ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಎ) ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶಿಲ್ದಾರ್ ರವರಿಂದ ಪಡೆದ ನಮೂನೆ–ಡಿ ಪ್ರಮಾಣ ಪತ್ರ.

ಬಿ) ಪ್ರವರ್ಗ–1 ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ–ಇ ಪ್ರಮಾಣ ಪತ್ರ.

ಸಿ) ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ವರ್ಗದ ಅಭ್ಯರ್ಥಿಗಳಿಗೆ ಸಂಬಂಧಪಟ್ಟ ತಹಶೀಲ್ದಾರ್ ರವರಿಂದ ಪಡೆದ ನಮೂನೆ–ಎಫ್ ಪ್ರಮಾಣ ಪತ್ರ.

ಸೂಚನೆ : ನಮೂನೆ–ಎಫ್ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕ: 14.09.2016ಕ್ಕೆ ಐದು ವರ್ಷಕ್ಕಿಂತ ಹಳೆಯದಾಗಿರಬಾರದು.

12. ಗ್ರಾಮೀಣ ಮೀಸಲಾತಿ:

ಎ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು 1ನೇ ತರಗತಿಯಿಂದ 7ನೇ ತರಗತಿ ಉತ್ತೀರ್ಣನಾಗುವವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರಬೇಕು.

ಬಿ) ಅಭ್ಯರ್ಥಿಯು ವ್ಯಾಸಂಗ ಮಾಡಿದ ಸ್ಥಳವು ವ್ಯಾಸಂಗ ಮಾಡಿದ ಅವಧಿಯಲ್ಲಿ ಅಂದಿನ ಕರ್ನಾಟಕ ಪೌರ ನಿಗಮಗಳ ಅಧಿನಿಯಮ, 1976ರ ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆಯ ಹಂತದಲ್ಲಿರುವ ಪ್ರದೇಶಗಳ ಹೊರತಾಗಿ ಇತರ ಯಾವುದೇ ಪ್ರದೇಶದಲ್ಲಿರುವ ಶಾಲೆಯಲ್ಲಿ ವ್ಯಾಸಂಗ ಮಾಡಿದ ಅಭ್ಯರ್ಥಿಯಾಗಿರಬೇಕು;

ಸಿ) ಗ್ರಾಮೀಣ ಮೀಸಲಾತಿಯನ್ನು ಕೋರುವ ಅಭ್ಯರ್ಥಿಯು ಕರ್ನಾಟಕ ಅಧಿಸೂಚನೆ ಸಂಖ್ಯೆ:ಸಿಆಸುಇ /08/ಸೆನೆನಿ/2001, ದಿನಾಂಕ: 13.02.2001ರ ಪ್ರಕಾರ ಮೇಲೆ ಪರಿಭಾಷಿಸಿದಂತೆ ತರಗತಿ 1 ರಿಂದ 7ನೇ ತರಗತಿಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವಿದ್ಯಾಭ್ಯಾಸ ಹೊಂದಿರುವವರು ಸರ್ಕಾರಿ ಆದೇಶ ಸಂಖ್ಯೆ. ಸಿಆಸುಇ/96/ಸೆನೆನಿ/2005, ದಿನಾಂಕ: 10.08.2005ರಲ್ಲಿ ನಿಗಧಿಪಡಿಸಿದ ನಮೂನೆ–2ರ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಶಾಲಾ ಮುಖ್ಯೋಪಾಧ್ಯಾಯರಿಂದ ಸಹಿ ಮಾಡಿಸಿ ಮತ್ತು ವ್ಯಾಪ್ತಿಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ಸಹಿ ಮಾಡಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆಯುವುದು. ನಮೂನೆ–1 (ನಾನ್–ಕ್ರೀಮಿ ಲೇಯರ್) ಮತ್ತು ನಮೂನೆ–2 ಇವುಗಳು ಗ್ರಾಮೀಣ ಮೀಸಲಾತಿ ಕೋರುವ ಸಾಮಾನ್ಯ ಅಭ್ಯರ್ಥಿಗಳಿಗೆ ಕಡ್ಡಾಯವಾಗಿರುತ್ತದೆ.

ಡಿ) ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ಸೇರಿದ ಅಭ್ಯರ್ಥಿಗಳು ನಮೂನೆ–2 ರಲ್ಲಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಪಾಧಿಕಾರದಿಂದ ಪಡೆದು ಸಲ್ಲಿಸುವುದು.

ಸೂಚನೆ : ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–2ಬಿ, ಪ್ರವರ್ಗ–3ಎ, ಪ್ರವರ್ಗ–3ಬಿ ವರ್ಗಗಳಿಗೆ ಸೇರಿದ ಅಭ್ಯರ್ಥಿಗಳ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹ ಅಭ್ಯರ್ಥಿಗಳು Non-Creamy Layer ಪ್ರಮಾಣ ಪತ್ರವನ್ನು ಹೊಂದಿರದಿದ್ದಲ್ಲಿ ಅವರು ಗ್ರಾಮೀಣ ಮೀಸಲಾತಿಗೂ ಅನರ್ಹರಾಗುತ್ತಾರೆ.

13. ಪ್ರಮುಖವಾದ ಸೂಚನೆಗಳು :

ಅಭ್ಯರ್ಥಿಗಳು ಕೋರುವ ಮೀಸಲಾತಿಗನುಗುಣವಾಗಿ ಕೆಳಕಂಡ ಪ್ರಮಾಣ ಪತ್ರಗಳ ದೃಢೀಕೃತ ನಕಲು ಪ್ರತಿಗಳನ್ನು ಅರ್ಜಿಯೊಂದಿಗೆ ತಪ್ಪದೇ ಲಗತ್ತಿಸತಕ್ಕದ್ದು.

ಎ) ವಿದ್ಯಾರ್ಹತೆಯ ಅಂಕಪಟ್ಟಿ.

ಬಿ) ಹುಟ್ಟಿದ ದಿನಾಂಕದ ಪ್ರಮಾಣ ಪತ್ರ (ಜನನ ಪ್ರಮಾಣ ಪತ್ರ)

ಸಿ) ಸರ್ಕಾರಿ ಇಲಾಖೆಯಲ್ಲಿ / ರಾಜ್ಯ ಸರ್ಕಾರದ / ಕೇಂದ್ರ ಸರ್ಕಾರದ / ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ /ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂತಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ ಬಗ್ಗೆ ಇಲಾಖಾ ಅನುಮತಿ ಪತ್ರ.

ಡಿ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ ಮತ್ತು 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ–ಡಿ/ಇ/ಎಫ್ ನಲ್ಲಿ ತಹಶೀಲ್ದಾರ್‌ರಿಂದ ಪಡೆದ ಪ್ರಮಾಣ ಪತ್ರ.

ಇ) ಗ್ರಾಮೀಣ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರಿಂದ ಪಡೆದು ಸಂಬಂಧಪಟ್ಟ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ಮೇಲು ರುಜು ಮಾಡಿಸಿರಬೇಕು.

ಟಿಪ್ಪಣಿ:– ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕ: 14.09.2016ರ ನಂತರ ಮಾಡಿಸುವ ಮೀಸಲಾತಿ ಪ್ರಮಾಣ ಪತ್ರಗಳನ್ನು ಯಾವುದೇ ಹಂತದಲ್ಲಿ ಗಣನೆಗೆ ತೆಗೆದುಕೊಳ್ಳುವುದಿಲ್ಲ.

ಎಫ್) ಅಭ್ಯರ್ಥಿಯು ಅರ್ಜಿಯಲ್ಲಿ ಭರ್ತಿ ಮಾಡಿದ ಮಾಹಿತಿಯು ಅಂತಿಮವಾಗಿರುತ್ತದೆ. ಆದ್ದರಿಂದ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಅರ್ಜಿಯ ಎಲ್ಲಾ ಕಾಲಂಗಳನ್ನು ಸರಿಯಾಗಿ ಭರ್ತಿ ಮಾಡತಕ್ಕದ್ದು.

ಜಿ) ನೇಮಕಾತಿ ಪ್ರಕ್ರಿಯೆಯ ಯಾವುದೇ ಹಂತದಲ್ಲಿ ವಿಳಾಸ ಬದಲಾವಣೆಯಾಗಿದ್ದಲ್ಲಿ ತಕ್ಷಣದಲ್ಲಿ ಅಭ್ಯರ್ಥಿಗಳು ಲಿಖಿತ ಮೂಲಕ ಸಂಬಂಧಪಟ್ಟ ಘಟಕಾಧಿಕಾರಿ (ಎಸ್‌ಪಿ & ಪ್ರಾಂಶುಪಾಲರ) ರವರ ನೇಮಕಾತಿ ಸಮಿತಿಯ ಗಮನಕ್ಕೆ ತರತಕ್ಕದ್ದು. ಈ ವಿಳಾಸ ಬದಲಾವಣೆಯನ್ನು ಪರಿಗಣಿಸಲು ನೇಮಕಾತಿ ಸಮಿತಿಯು ಪ್ರಯತ್ನಿಸುವುದು. ಆದಾಗ್ಯೂ ಈ ವಿಚಾರದಲ್ಲಿ ನೇಮಕಾತಿ ಸಮಿತಿಯು ಯಾವುದೇ ಜವಾಬ್ದಾರಿಯನ್ನು ವಹಿಸಿಕೊಳ್ಳುವುದಿಲ್ಲ. ಈ ಬಗ್ಗೆ ಅಭ್ಯರ್ಥಿಗಳು ಎಚ್ಚರ ವಹಿಸತಕ್ಕದ್ದು.

ಹೆಚ್) ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವಾಗ ಯಾವುದೇ ಸುಳ್ಳು/ತಪ್ಪು ಮಾಹಿತಿಗಳನ್ನು ನೀಡಬಾರದು. ಹಾಗೇ ನೀಡಿ ತದನಂತರ ನೇಮಕಾತಿ ಸಮಿತಿಗೆ ಅದು ಪತ್ತೆಯಾದಲ್ಲಿ ಅಂತಹ ಅಭ್ಯರ್ಥಿಗಳ ಅಭ್ಯರ್ಥಿತನವನ್ನು ರದ್ದುಪಡಿಸಲಾಗುವುದು.

14. ವಿಶೇಷ ಸೂಚನೆಗಳು :

ಅಭ್ಯರ್ಥಿಗಳು ನೇಮಕಾತಿ ಸಮಿತಿಯು ನಿಗಧಿಪಡಿಸಿದ ಅರ್ಜಿ ನಮೂನೆಯಲ್ಲಿಯೇ ಎಲ್ಲಾ ಅಂಕಣಗಳನ್ನು ಸ್ಪಷ್ಟವಾಗಿ ಭರ್ತಿ ಮಾಡತಕ್ಕದ್ದು. ಇತರೆ ಯಾವುದೇ ನಮೂನೆಗಳಲ್ಲಿ ಸಲ್ಲಿಸುವ, ಶುಲ್ಕ ಪಾವತಿಸದೆ ಸಲ್ಲಿಸಲ್ಪಡುವ, ಅಪೂರ್ಣವಾಗಿರುವ, ಸಹಿ ಮಾಡದ ಹಾಗೂ ಭಾವಚಿತ್ರ ಇಲ್ಲದೆ ಇರುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಹಾಗೂ ಕೆಳಕಂಡ ವಿಶೇಷ ಸೂಚನೆಗಳನ್ನು ಗಮನಿಸುವುದು.

ಎ) ಸೇವೆಯಲ್ಲಿರುವ ಅಭ್ಯರ್ಥಿಗಳು ಅವರು ಸೇವೆಯಲ್ಲಿರುವ ಬಗ್ಗೆ ಅರ್ಜಿಯಲ್ಲಿನ ನಿಗದಿತ ಕಾಲಂನ್ನು ತುಂಬತಕ್ಕದ್ದು ಹಾಗೂ ಅವರ ಸೇವಾ ಪ್ರಮಾಣ ಪತ್ರ ಮತ್ತು ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವ ಬಗ್ಗೆ ನಿರಾಕ್ಷೇಪಣ ಪ್ರಮಾಣ ಪತ್ರವನ್ನು (No Objection Certificate) ಸಂಬಂಧಿತ ಇಲಾಖಾ ಮುಖ್ಯಸ್ಥರಿಂದ ಪಡೆದು ಸಲ್ಲಿಸತಕ್ಕದ್ದು.

ಬಿ) ಒಂದು ವೇಳೆ ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕವು ಸಾರ್ವತ್ರಿಕ ರಜಾ/ ಬಂದ್ ದಿನವಾಗಿ ಘೋಷಿಸಲ್ಪಟ್ಟರೆ ಆ ದಿನಾಂಕದ ಮಾರನೆಯ ಕೆಲಸದ ದಿನದಂದು ಅರ್ಜಿಗಳನ್ನು ಸ್ವೀಕರಿಸಲಾಗುವುದು. ಆದರೆ ವಯೋಮಿತಿ ಹಾಗೂ ಕನಿಷ್ಠ ಶೈಕ್ಷಣಿಕ ವಿದ್ಯಾರ್ಹತೆಯ ಪರಿಗಣನೆಗೆ ದಿನಾಂಕ: 14.09.2016 ಮಾತ್ರ ಅನ್ವಯವಾಗುತ್ತದೆ

ಸಿ) ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ತುಂಬದೇ ಸದರಿ ಅರ್ಜಿ ತಿರಸ್ಕೃತವಾದಲ್ಲಿ ತತ್ಸಂಬಂಧ ಯಾವುದೇ ರೀತಿಯ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.

ಡಿ) ಕರ್ನಾಟಕ ರಾಜ್ಯದ, ಕೇಂದ್ರ ಸರ್ಕಾರದ ಯಾವುದೇ ಸರ್ಕಾರಿ ಹಾಗೂ ಅರೆ ಸರ್ಕಾರಿ ಸಂಸ್ಥೆಯ ಸೇವೆಯಿಂದ ವಜಾ ಗೊಂಡಿರುವ ನೌಕರರು ನೇಮಕಾತಿಗೆ ಅರ್ಹರಲ್ಲ.

ಇ) ಅಭ್ಯರ್ಥಿಯು ಹುದ್ದೆಗೆ ಅರ್ಜಿ ಸಲ್ಲಿಸಿದ ತಕ್ಷಣ ತಾನು ನಿಯಮ & ನಿಬಂಧನೆಗಳಿಗೆ (Rules & Regulations) ಬದ್ಧನಾಗಿರುತ್ತಾರೆ ಎಂದು ಭಾವಿಸಲಾಗಿರುತ್ತದೆ. ಒಂದು ವೇಳೆ ತಾನು ಸದರಿ ಹುದ್ದೆಗೆ ಆಯ್ಕೆಯಾಗದ ಪಕ್ಷದಲ್ಲಿ ತದನಂತರ ಅದೇ ನಿಯಮಗಳನ್ನು ಪ್ರಶ್ನಿಸಲು ಬರುವುದಿಲ್ಲ.

ಎಫ್) **ದುರ್ನಡತೆ :** ಒಬ್ಬ ಅಭ್ಯರ್ಥಿಯು ನಕಲಿ ವ್ಯಕ್ತಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆ ಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗಾಗಿ ನಡೆಸಲಾದ ಪರೀಕ್ಷೆಯಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಪರೀಕ್ಷಾ ಕೊಠಡಿಯಲ್ಲಿ ದುರ್ವರ್ತಿಸುತ್ತಿರುವನೆಂದು, ತಪ್ಪಿತಸ್ಥನೆಂದು ಕಂಡುಬಂದಲ್ಲಿ ಹಾಗೂ ನೇಮಕಾತಿ ಸಮಿತಿಯಿಂದ ನೀಡಲಾದ ಯಾವುದೇ ಸೂಚನೆಗಳ್ನು ಉಲ್ಲಂಘಿಸುತ್ತಿರುವನೆಂದು ಅಥವಾ ಅವನು ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೆ ಅಕ್ರಮ ಮತ್ತು ಅನುಚಿತ

ಮಾರ್ಗವನ್ನು ಅವಲಂಬಿಸಿರುವನೆಂದು, ಕಂಡುಬಂದಲ್ಲಿ ಅಭ್ಯರ್ಥಿಯು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೆ, ನೇಮಕಾತಿ ಸಮಿತಿ ನಡೆಸುವ ಯಾವುದೇ ಪರೀಕ್ಷೆಗೆ ಪ್ರವೇಶ ಪಡೆಯುವುದರಿಂದ ಅಥವಾ ಯಾವುದೇ ಹುದ್ದೆಯ ಆಯ್ಕೆಗೆ ಖಾಯಂ ಆಗಿ ಡಿಬಾರ್ ಮಾಡಲಾಗುವುದು.

ಎಸ್‌ಪಿ & ಪ್ರಭಾರ ಪ್ರಾಂಶುಪಾಲರು
ಪೊಲೀಸ್ ತರಬೇತಿ ಶಾಲೆ
ಗಾಡೇನಹಳ್ಳಿ, ಶಾಂತಿಗ್ರಾಮ, ಹಾಸನ ಜಿಲ್ಲೆ

(ಪ.ಜಾ/ಪ.ಪಂ ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಡಿ

(ನಿಯಮ 3ಎ (2) (3) ನೋಡಿ)

ಅನುಸೂಚಿತ ಜಾತಿ ಅಥವಾ ಅನುಸೂಚಿತ ಬುಡಕಟ್ಟುಗಳಿಗೆ (ಪ.ಜಾ /ಪ.ಪಂ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಪ್ರಮಾಣ ಪತ್ರಗಳ ನಮೂನೆ

ಪ್ರಮಾಣ ಪತ್ರ

.... ರಾಜ್ಯದ / ಕೇಂದ್ರಾಡಳಿತ ಪ್ರದೇಶದ * .... ಜಿಲ್ಲೆಯ/ ವಿಭಾಗದ .... ಗ್ರಾಮ / ಪಟ್ಟಣದ * ನಿವಾಸಿಯಾದ ಶ್ರೀ / ಶ್ರೀಮತಿ .... ಎಂಬುವವರ ಮಗ / ಮಗಳಾದ ಶ್ರೀ / ಶ್ರೀಮತಿ .... ಇವರು ಅನುಸೂಚಿತ ಜಾತಿ / ಅನುಸೂಚಿತ ಬುಡಕಟ್ಟು * ಎಂದು ಮಾನ್ಯ ಮಾಡಲಾಗಿರುವ ಜಾತಿ / ಬುಡಕಟ್ಟಿಗೆ * ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

* ಸಂವಿಧಾನ (ಅನುಸೂಚಿತ ಜಾತಿಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಜಾತಿ) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1950
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳು) (ಕೇಂದ್ರಾಡಳಿತ ಪ್ರದೇಶಗಳು) ಆದೇಶ, 1951

(ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ ಪಟ್ಟಿ (ಮಾರ್ಪಾಡು) ಆದೇಶ 1956, ಮುಂಬಯಿ ರಾಜ್ಯ ಪುನರ್ ರಚನಾ ಅಧಿನಿಯಮ, 1960, ಪಂಜಾಬ್ ರಾಜ್ಯ ಪುನರ್ ರಚನಾ ಅಧಿನಿಯಮ, 1966, ಹಿಮಾಚಲ ಪ್ರದೇಶ ರಾಜ್ಯ ಅಧಿನಿಯಮ, 1970 ಮತ್ತು ಈಶಾನ್ಯ ಪ್ರದೇಶಗಳ (ಪುನರ್ ರಚನಾ ಅಧಿನಿಯಮ, 1971ರ ಮೂಲಕ ತಿದ್ದುಪಡಿಯಾದಂತೆ).

* ಸಂವಿಧಾನ
* ಸಂವಿಧಾನ (ಜಮ್ಮು ಮತ್ತು ಕಾಶ್ಮೀರ) ಅನುಸೂಚಿತ ಜಾತಿಗಳ ಆದೇಶ, 1956
* ಅನುಸೂಚಿತ ಜಾತಿ ಮತ್ತು ಅನುಸೂಚಿತ ಬುಡಕಟ್ಟುಗಳ (ತಿದ್ದುಪಡಿ) ಅಧಿನಿಯಮ, 1976ರ ಮೂಲಕ ತಿದ್ದುಪಡಿಯಾದಂತೆ ಸಂವಿಧಾನ (ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ) ಅನುಸೂಚಿತ ಬುಡಕಟ್ಟುಗಳ ಆದೇಶ, 1959.
* ಸಂವಿಧಾನ (ದಾದರ್ ಮತ್ತು ನಗರ ಹವೇಲಿ) ಅನುಸೂಚಿತ ಜಾತಿಗಳ ಆದೇಶ, 1962
* ಸಂವಿಧಾನ (ಪಾಂಡಿಚೇರಿ) ಅನುಸೂಚಿತ ಜಾತಿಗಳ ಆದೇಶ, 1964
* ಸಂವಿಧಾನ (ಅನುಸೂಚಿತ ಬುಡಕಟ್ಟುಗಳ) (ಉತ್ತರ ಪ್ರದೇಶ) ಆದೇಶ, 1967
* ಸಂವಿಧಾನ (ಗೋವಾ, ದಮನ್ ಮತ್ತು ದೀವ್) ಅನುಸೂಚಿತ ಜಾತಿ / ಬುಡಕಟ್ಟುಗಳ ಆದೇಶ, 1988
* ಸಂವಿಧಾನ (ನಾಗಾಲ್ಯಾಂಡ್) ಅನುಸೂಚಿತ ಬುಡಕಟ್ಟುಗಳ ಆದೇಶ

2. ಶ್ರೀ / ಶ್ರೀಮತಿ / ಕುಮಾರಿ* .... ಮತ್ತು / ಅಥವಾ ಅವನ* / ಅವಳ* ಕುಟುಂಬವು .... ರಾಜ್ಯ / ಕೇಂದ್ರಾಡಳಿತ ಪ್ರದೇಶದ .... ಜಿಲ್ಲಾ / ವಿಭಾಗದ .... ಗ್ರಾಮ / ಪಟ್ಟಣದ ಸಾಮಾನ್ಯ ನಿವಾಸಿ (ಗಳು)

ಸಹಿ ....

ತಹಶೀಲ್ದಾರರು ....

ಸ್ಥಳ : ಪದನಾಮ

ದಿನಾಂಕ : ಕಛೇರಿಯ ಮೊಹರಿನೊಂದಿಗೆ

ರಾಜ್ಯ / ಕೇಂದ್ರಾಡಳಿತ ಪ್ರದೇಶ*

ಅನ್ವಯವಾಗದಿರುವ ಪದಗಳನ್ನು ದಯವಿಟ್ಟು ಬಿಟ್ಟು ಬಿಡಿ / ಹೊಡೆದು ಹಾಕಿ

ಸೂಚನೆ : ಇಲ್ಲಿ ಉಪಯೋಗಿಸಿದ **"ಸಾಮಾನ್ಯ ನಿವಾಸಿಗಳೂ"** ಎಂಬ ಪದಾವಳಿಯು ಪ್ರಜಾ ಪ್ರಾತಿನಿಧ್ಯ ಅಧಿನಿಯಮ, 1950ರ 20ನೇ ಪ್ರಕರಣದಲ್ಲಿರುವ ಅರ್ಥವನ್ನೇ ಹೊಂದಿರುತ್ತದೆ.

ಭಾರತ ಸರ್ಕಾರದ ಪತ್ರ ಸಂಖ್ಯೆ. ಬಿಸಿ 12028 / 2/ 76–ಎಸ್‌ಸಿಟಿ–1 ಗೃಹ ಮಂತ್ರಾಲಯದ ಅನುಸಾರವಾಗಿ, ಅಂಥ ಪ್ರಮಾಣ ಪತ್ರಗಳನ್ನು ನೀಡಲು ಸಕ್ಷಮವಾಗಿರುವುದಕ್ಕಾಗಿ, ಭಾರತ ಸರ್ಕಾರದ (ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ) ಪತ್ರ ಸಂಖ್ಯೆ 13.02.74 ಇಎಸ್‌ಟಿ (ಎಸ್‌ಸಿಟಿ) ದಿನಾಂಕ 5ನೇ ಆಗಸ್ಟ್ 1975ರಲ್ಲಿ ನಮೂದಿಸಿದ ಪ್ರಾಧಿಕಾರಿಯು, ರಾಷ್ಟ್ರಪತಿಗಳು ಸಂಬಂಧಪಟ್ಟ ಆದೇಶದ ಅಧಿಸೂಚನೆಯನ್ನು ಹೊರಡಿಸಿದ ಸಮಯದಲ್ಲಿ ಪ್ರಮಾಣ ಪತ್ರಕ್ಕಾಗಿ ಅರ್ಜಿ ಸಲ್ಲಿಸಿದ ವ್ಯಕ್ತಿಯು, ತನ್ನ ಖಾಯಂ ವಾಸ ಸ್ಥಳವನ್ನು ಹೊಂದಿದ್ದ ಸ್ಥಳಕ್ಕೆ ಸೇರಿದವರೊಬ್ಬರಾಗಿರತಕ್ಕದ್ದು. ಅದೇ ರೀತಿಯಲ್ಲಿ, ಒಂದು ತಾಲ್ಲೂಕಿನ ರೆವಿನ್ಯೂ ಪ್ರಾಧಿಕಾರಿಯು ಇನ್ನೊಂದು ತಾಲ್ಲೂಕಿಗೆ ಸೇರಿದ ವ್ಯಕ್ತಿಗಳಿಗೆ ಸಂಬಂಧಪಟ್ಟ ಪ್ರಮಾಣ ಪತ್ರವನ್ನು ನೀಡಲು ಸಕ್ಷಮ ಪ್ರಾಧಿಕಾರಿಯಾಗುವುದಿಲ್ಲ.

(ಪ್ರವರ್ಗ – 1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಇ

(ನಿಯಮ 3ಎ (2) (3) ನೋಡಿ)

ಹಿಂದುಳಿದ ವರ್ಗಗಳಿಗೆ (ಪ್ರವರ್ಗ–1) ಸೇರಿದ ಅಭ್ಯರ್ಥಿಗೆ ನೀಡುವ ಪ್ರಮಾಣ ಪತ್ರ

.... ಗ್ರಾಮ / ಪಟ್ಟಣದ / ನಗರ ನಿವಾಸಿಯಾದ ಶ್ರೀ / ಶ್ರೀಮತಿ .... ಇವರ ಮಗ / ಮಗಳು / ಪತ್ನಿ / ಪತಿಯಾದ ಶ್ರೀ / ಶ್ರೀಮತಿ .... ಇವರು ಹಿಂದುಳಿದ ವರ್ಗಗಳ (ಪ್ರವರ್ಗ) .... ಜಾತಿಯ .... ಉಪ ಜಾತಿಗೆ ಸೇರಿರುತ್ತಾರೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : .... ತಾಲ್ಲೂಕು

ಕಛೇರಿಯ ಮೊಹರು

(ಪ್ರವರ್ಗ – 2ಎ, 2ಬಿ, 3ಎ, 3ಬಿ ಗೆ ಸೇರಿದ ಅಭ್ಯರ್ಥಿಗಳಿಗೆ ಮಾತ್ರ)

ನಮೂನೆ – ಎಫ್

(ನಿಯಮ 3ಎ (2) (3)ನ್ನು ನೋಡಿ)

ಹಿಂದುಳಿದ ವರ್ಗಗಳಿಗೆ (2ಎ, 2ಬಿ, 3ಎ, 3ಬಿ) ಸೇರಿದ ಅಭ್ಯರ್ಥಿಗಳಿಗೆ ನೀಡುವ ಆದಾಯ ಮತ್ತು

ಜಾತಿ ಪ್ರಮಾಣ ಪತ್ರ

.... ರಲ್ಲಿ ವಾಸವಾಗಿರುವ ಶ್ರೀ / ಶ್ರೀಮತಿ .... ಇವರ ಮಗ / ಮಗಳು / ಪತಿ / ಪತ್ನಿಯಾದ ಶ್ರೀ/ಶ್ರೀಮತಿ/ಕುಮಾರಿ .... ಇವರು ಮತ್ತು ಆತನ / ಅವಳ ತಂದೆ / ತಾಯಿ / ಪೋಷಕರು/ಪತ್ನಿ/ಪತಿಯು, ಸರ್ಕಾರಿ ಆದೇಶಗಳ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರಲ್ಲಿ ನಿರ್ದಿಷ್ಟ ಪಡಿಸಿದ ಮೇಲುಸ್ತರದ (ಕ್ರಿಮಿ ಲೇಯರ್) ವ್ಯಾಪ್ತಿಯಲ್ಲಿ ಬರುವುದಿಲ್ಲವೆಂದು ;

ಅಭ್ಯರ್ಥಿಯಾಗಲಿ ಅಥವಾ ಆತನ / ಆಕೆಯ ತಂದೆ ತಾಯಿ/ಪೋಷಕರಾಗಲಿ / ಪತ್ನಿ / ಪತಿಯಾಗಲಿ, ಸರ್ಕಾರದ ಸೇವೆಯಲ್ಲಿ 1ನೇ ದರ್ಜೆಯ ಅಥವಾ 2ನೇ ದರ್ಜೆಯ ಅಧಿಕಾರಿಯಾಗಿಲ್ಲವೆಂದು ;

ಅಥವಾ

ಸಾರ್ವಜನಿಕ ವಲಯ ಉದ್ಯಮದಲ್ಲಿ ತತ್ಸಮಾನವಾದ ಹುದ್ದೆಯನ್ನು ಹೊಂದಿರುವುದಿಲ್ಲ ;

ಅಥವಾ

ಖಾಸಗಿ ನಿಯೋಜಕರ ಕೈಕೆಳಗೆ, 2ನೇ ದರ್ಜೆಯ ಅಧಿಕಾರಿಯ ಸಂಬಳಕ್ಕಿಂತ (ವೇತನ ಶ್ರೇಣಿ ₹ 11400–21600/– ಪ್ರಾರಂಭಿಕ ಹಂತ) ಕಡಿಮೆಯಲ್ಲದ ಸಂಬಳವನ್ನು ಪಡೆಯುವ ನೌಕರನಾಗಿಲ್ಲವೆಂದು

ಅಥವಾ

ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯ ಆದಾಯವು ಎರಡು ಲಕ್ಷ ಮೀರುವುದಿಲ್ಲವೆಂದು ;

ಅಥವಾ

ಕರ್ನಾಟಕ ಭೂ ಸುಧಾರಣಾ ಅಧಿನಿಯಮ 1961ರಲ್ಲಿ ನಿಗದಿಪಡಿಸಿರುವಂತೆ ಆತನ/ಆಕೆಯ ತಂದೆ ತಾಯಿ/ಪೋಷಕರು/ಪತ್ನಿ/ಪತಿಯು ಮಾರಾಟ ತೆರಿಗೆದಾರನಲ್ಲ ಅಥವಾ ಆತನ/ಆಕೆಯ ತಂದೆ ತಾಯಿ/ಪೋಷಕ/ಪತ್ನಿ/ಪತಿಯು ಅಥವಾ ಇವರಿಬ್ಬರೂ 10 ಯುನಿಟ್‌ಗಿಂತ ಹೆಚ್ಚಿನ ಕೃಷಿ ಭೂಮಿ ಅಥವಾ 25 ಎಕರೆಗಳಿಗಿಂತ ಹೆಚ್ಚಿನ ಪ್ಲಾಂಟೇಶನ್ ಭೂಮಿಯನ್ನು ಹೊಂದಿರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ. ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಶ್ರೀ/ಶ್ರೀಮತಿ/ಕುಮಾರಿ .... ಇವರು .... ಜಾತಿಗೆ .... ಸೇರಿದ ಉಪಜಾತಿಯವರಾಗಿದ್ದು ಸರ್ಕಾರಿ ಆದೇಶ ಸಂಖ್ಯೆ. ಎಸ್‌ಡಬ್ಲ್ಯೂಡಿ 225 ಬಿಸಿಎ 2000, ದಿನಾಂಕ 30.03.2002ರ ಅನ್ವಯ ಹಿಂದುಳಿದ ವರ್ಗಗಳ ಪ್ರವರ್ಗ .... (2ಎ, 2ಬಿ, 3ಎ, 3ಬಿ) ಸೇರಿರುತ್ತಾರೆ.

ಸ್ಥಳ : ತಹಶೀಲ್ದಾರರು

ದಿನಾಂಕ : .... ತಾಲ್ಲೂಕು

ಕಛೇರಿಯ ಮೊಹರು

ನಮೂನೆ–1

ಜನರಲ್ ಮೆರಿಟ್ ಅಭ್ಯರ್ಥಿಗಳು ಮೇಲುಸ್ತರಕ್ಕೆ ಸೇರಿಲ್ಲವೆಂದು, ದೃಢೀಕರಿಸಿ ಗ್ರಾಮೀಣ ಮೀಸಲಾತಿಯನ್ನು ಕೋರಲು ಸಲ್ಲಿಸಬೇಕಾದ ಪ್ರಮಾಣ ಪತ್ರ

(ಜನರಲ್ ಮೆರಿಟ್ ಅಭ್ಯರ್ಥಿಗಳು ಭರ್ತಿ ಮಾಡಬೇಕಾದ ನಮೂನೆ)

ಇವರಿಗೆ:

ತಹಶೀಲ್ದಾರರು,

.... ತಾಲ್ಲೂಕು,

.... ಜಿಲ್ಲೆ.

ಮಾನ್ಯರೆ,

ಶ್ರೀ / ಶ್ರೀಮತಿ .... ಎಂಬುವವರ ಮಗ/ಮಗಳು/ಪತಿ/ಪತ್ನಿ............................. ಆದ ನಾನು ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ನೇರ ನೇಮಕಾತಿಯಲ್ಲಿ ಗ್ರಾಮೀಣ ಅಭ್ಯರ್ಥಿ ಮೀಸಲಾತಿಯನ್ನು ಪಡೆಯುವುದಕ್ಕಾಗಿ ಪ್ರಮಾಣ ಪತ್ರವನ್ನು ಪಡೆಯಲು ತಮ್ಮಲ್ಲಿ ಈ ಕೆಳಕಂಡ ಮಾಹಿತಿಗಳನ್ನು ಒದಗಿಸುತ್ತಾ ಕೋರುತ್ತೇನೆ.

1. ಅಭ್ಯರ್ಥಿಯ ಹೆಸರು ಮತ್ತು ಉದ್ಯೋಗ :
2. ಅಭ್ಯರ್ಥಿಯ ಸ್ವಂತ ಸ್ಥಳ ಗ್ರಾಮ :
   ತಾಲ್ಲೂಕು :
   ಜಿಲ್ಲೆ :
3. ಅಭ್ಯರ್ಥಿಯು ಹುಟ್ಟಿದ ದಿನಾಂಕ ವಯಸ್ಸು ಮತ್ತು ಹುಟ್ಟಿದ ಸ್ಥಳ :
4. ಅಭ್ಯರ್ಥಿಯ ತಂದೆ/ತಾಯಿ/ಪೋಷಕರ ಪತಿಯ/ಪತ್ನಿಯ ಹೆಸರು ಮತ್ತು ಉದ್ಯೋಗ:
   (ಉದ್ಯೋಗವು ಸರ್ಕಾರಿ/ಅರೆ ಸರ್ಕಾರಿ/ಸಾರ್ವಜನಿಕ ಉದ್ಯಮ/ಖಾಸಗಿ)
5. ಅಭ್ಯರ್ಥಿಯ ಪ್ರಸ್ತುತ ವಿಳಾಸ :
   (ಸ್ಪಷ್ಟವಾಗಿ ನಮೂದಿಸುವುದು)
6. ಅಭ್ಯರ್ಥಿಯ ಖಾಯಂ ವಿಳಾಸ :
7. ಅಭ್ಯರ್ಥಿಯ ಶಾಲಾ ಶಿಕ್ಷಣದ ವ್ಯಾಸಂಗ ಮಾಡಿದ ಶಾಲೆಗಳ ವಿವರಗಳು
   ಪ್ರಾಥಮಿಕ
   ಮಾಧ್ಯಮಿಕ
   ಪ್ರೌಢ
8. ಅಭ್ಯರ್ಥಿಯ ಹಾಗೂ ಅಭ್ಯರ್ಥಿಯ ತಂದೆ/ತಾಯಿ/ಪೋಷಕರ (ತಂದೆ/ತಾಯಿ ಜೀವಂತವಿಲ್ಲದಿದ್ದರೆ) ಇವರ ಒಟ್ಟು ವಾರ್ಷಿಕ ಆದಾಯ ಎಲ್ಲಾ ಮೂಲಗಳಿಂದ :

1) ವೇತನ ಶ್ರೇಣಿ

2) ಜಮೀನಿನ ವಿವರ

3) ಇತರ ಮೂಲಗಳು

9. ಆದಾಯ ತೆರಿಗೆ ಪಾವತಿದಾರರೇ ?

10. ಸಂಪತ್ತು ತೆರಿಗೆ ಪಾವತಿದಾರರೇ ?

11. ಮಾರಾಟ ತೆರಿಗೆ ಪಾವತಿದಾರರೇ ?

ಪ್ರಮಾಣೀಕೃತ ಘೋಷಣೆ

ಈ ಮೇಲೆ ನನ್ನಿಂದ ಒದಗಿಸಿದ ಮಾಹಿತಿ/ವಿವರಣೆಯು ನಾನು ತಿಳಿದಿರುವಷ್ಟರ ಮಟ್ಟಿಗೆ ಸತ್ಯವೆಂದು ಶ್ರದ್ಧಾಪೂರ್ವಕವಾಗಿ ದೃಢೀಕರಿಸುತ್ತೇನೆ ಮತ್ತು ಘೋಷಿಸುತ್ತೇನೆ.

ಸ್ಥಳ : ತಮ್ಮ ವಿಧೇಯ

ದಿನಾಂಕ : (ಅಭ್ಯರ್ಥಿಯ ಸಹಿ)

ಮೇಲೆ ಒದಗಿಸಲಾದ ಮಾಹಿತಿಗಳು ಸತ್ಯವಾಗಿರುತ್ತದೆ ಎಂದು ಪ್ರಮಾಣೀಕರಿಸುತ್ತಾ ಈ ಮಾಹಿತಿಗಳು ಅಸತ್ಯವೆಂದು ದೃಢಪಟ್ಟಲ್ಲಿ ಅಪರಾಧ ವಿಚಾರಣೆಗೆ ಬದ್ಧನಾಗಿರುತ್ತೇನೆ.

ಸ್ಥಳ : ತಂದೆ/ತಾಯಿ/ಪೋಷಕರ ಸಹಿ

ದಿನಾಂಕ : (ತಂದೆ/ತಾಯಿ ಜೀವಂತವಿಲ್ಲದಿದ್ದರೆ)

(ಹೆಂಡತಿ/ಗಂಡ/ಇವರ ಸಹಿ)

ಸ್ಥಳೀಯ ಇಬ್ಬರು ಸಾಕ್ಷಿದಾರರು

ಅಭ್ಯರ್ಥಿಯ ಮತ್ತು ಅವರ ತಂದೆ/ತಾಯಿ/ಪೋಷಕರು/ಪತಿ/ಪತ್ನಿ ಇವರನ್ನು ಹಾಗೂ ಇವರ ಸಹಿಯನ್ನು ಗುರುತಿಸುತ್ತೇವೆ.

ಸಾಕ್ಷಿದಾರರ ಸಹಿ 1)

(ಪೂರ್ಣ ವಿಳಾಸದೊಂದಿಗೆ) 2)

ಪರಿಶೀಲನಾ ಪ್ರಮಾಣ ಪತ್ರ

1. ಶ್ರೀ/ಶ್ರೀಮತಿ.. ಎಂಬುವವರ ಮಗ/ಮಗಳು/ಪತಿ/ಪತ್ನಿ/ಶ್ರೀ/ ಶ್ರೀಮತಿ/ಕುಮಾರಿ................................ ಎಂಬುವವರು ಕರ್ನಾಟಕ ರಾಜ್ಯದ .... ಜಿಲ್ಲೆಯ ವಿಭಾಗ .... ಗ್ರಾಮ/ಪಟ್ಟಣ/ನಗರದಲ್ಲಿ ಸಾಮಾನ್ಯ ನಿವಾಸಿಯಾಗಿದ್ದಾರೆ ಮತ್ತು ಇವರು ಜನರಲ್ ಮೆರಿಟ್ ವರ್ಗಕ್ಕೆ ಸೇರಿದವರಾಗಿರುತ್ತಾರೆ.

2. ಶ್ರೀ/ಶ್ರೀಮತಿ/ಕುಮಾರಿ .... ಇವರ ತಂದೆ/ತಾಯಿ/ಪೋಷಕರು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಜನರಲ್ ಮೆರಿಟ್ ವರ್ಗದ ಮೇಲುಸ್ತರದಲ್ಲಿ (Creamy Layer) ಬರುವುದಿಲ್ಲವೆಂದು ಪ್ರಮಾಣೀಕರಿಸಲಾಗಿದೆ.

ಸ್ಥಳ : ತಹಶೀಲ್ದಾರರು

ದಿನಾಂಕ : .... ತಾಲ್ಲೂಕು

ಕಛೇರಿಯ ಮೊಹರು

ಸೂಚನೆ–1: ಇದರಲ್ಲಿ ಉಪಯೋಗಿಸಲಾದ **"ಸಾಮಾನ್ಯ ನಿವಾಸಿ"** ಎಂಬ ಪದವು 1950ರ ಜನತಾ ಪ್ರಾತಿನಿಧ್ಯ ಕಾಯ್ದೆಯ 20ನೇ ಅನುಚ್ಛೇದದಲ್ಲಿನ ಅರ್ಥವನ್ನು ಹೊಂದಿರುತ್ತದೆ.

ಸೂಚನೆ–2: ಪರಿಶೀಲನಾ ಪ್ರಮಾಣ ಪತ್ರ ನೀಡುವ ಅಧಿಕೃತ ಅಧಿಕಾರಿಯು ಸರ್ಕಾರಿ ಆದೇಶ ಸಂಖ್ಯೆ ಎಸ್‌ಡಬ್ಲ್ಯೂಡಿ 251 ಬಿಸಿಎ 94, ಬೆಂಗಳೂರು, ದಿನಾಂಕ 31.01.1995 ರನ್ವಯ ಮೇಲುಸ್ತರ (Creamy Layer) ದವರನ್ನು ಗುರುತಿಸಲು ನಿಗದಿಪಡಿಸಲಾಗಿರುವ ಅಂಶಗಳನ್ನು ವಿವರವಾಗಿ ಖಚಿತಪಡಿಸಿಕೊಂಡ ನಂತರವೇ ಪ್ರಮಾಣ ಪತ್ರ ನೀಡತಕ್ಕದ್ದು.

ನಮೂನೆ – 2

ಗ್ರಾಮೀಣ ಅಭ್ಯರ್ಥಿ ಪ್ರಮಾಣ ಪತ್ರ

ಶ್ರೀ / ಶ್ರೀಮತಿ .... ರವರ ಮಗ/ಮಗಳು/ಪತ್ನಿ/ಶ್ರೀ/ಶ್ರೀಮತಿ/ಕುಮಾರಿ .... ಜಿಲ್ಲೆ .... ತಾಲ್ಲೂಕು .... ಗ್ರಾಮದಲ್ಲಿ .... ವಾಸವಾಗಿರುವ ಇವರು ಒಂದನೇ ತರಗತಿಯಿಂದ .... ತರಗತಿಯವರೆಗೆ .... ಜಿಲ್ಲೆ .... ತಾಲ್ಲೂಕು .... ಪಟ್ಟಣ .... ಶಾಲೆಯಲ್ಲಿ ವ್ಯಾಸಂಗ ಮಾಡಿ .... ವರ್ಷ ನಡೆದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುತ್ತಾರೆ. ಈ ಶಾಲೆಯು ಅಭ್ಯರ್ಥಿಯು ವ್ಯಾಸಂಗ ಮಾಡಿದ ಅವಧಿಯಲ್ಲಿ ಕರ್ನಾಟಕದ ಪೌರ ನಿಗಮಗಳ ಅಧಿನಿಯಮ, 1976 ಅಥವಾ ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ನಿರ್ದಿಷ್ಟ ಪಡಿಸಿದ ಒಂದು ದೊಡ್ಡ ನಗರ ಪ್ರದೇಶ, ಸಣ್ಣ ನಗರ ಪ್ರದೇಶ ಅಥವಾ ಪರಿವರ್ತನೆ ಹಂತದಲ್ಲಿರುವ ಪ್ರದೇಶಗಳ ಹೊರತಾದ ಪ್ರದೇಶದಲ್ಲಿತ್ತು.

ಸ್ಥಳ : ಮುಖ್ಯೋಪಾಧ್ಯಾಯರ ಸಹಿ

ದಿನಾಂಕ : ಮತ್ತು ಸಂಸ್ಥೆಯ ಪೂರ್ಣ ವಿಳಾಸವುಳ್ಳ ಮೊಹರು

ಮೇಲುರುಜು

ಕ್ಷೇತ್ರ ಶಿಕ್ಷಣಾಧಿಕಾರಿ

ಕರ್ನಾಟಕ ರಾಜ್ಯ ಪೊಲೀಸ್

ಪೊಲೀಸ್ ತರಬೇತಿ ಶಾಲೆ, ಗಾಡೇನಹಳ್ಳಿ, ಶಾಂತಿಗ್ರಾಮ(ಹೋ), ಹಾಸನ ಜಿಲ್ಲೆ–573220

ಅನುಯಾಯಿ ಹುದ್ದೆಗಳ ನೇಮಕಾತಿ 2016–ಅರ್ಜಿ ನಮೂನೆ

ಸಂಖ್ಯೆ: ಪೊತಶಾ/(ಹಾ)/ಸಿಬ್ಬಂದಿ–1/24/2016–17, ದಿನಾಂಕ:30.07.2016

ಪಾಸ್‌ಪೋರ್ಟ್ ಸೈಜ್ ಭಾವಚಿತ್ರ ಅಂಟಿಸುವುದು

ಕ್ರಸಂ.	ಒದಗಿಸಬೇಕಾದ ಮಾಹಿತಿ	ಅಭ್ಯರ್ಥಿಯ ವಿವರ
1	ಅರ್ಜಿದಾರರ ಪೂರ್ಣ ಹೆಸರು	
2	ಲಿಂಗ (ಗಂಡು–ಹೆಣ್ಣು)	
3	ಜನ್ಮ ದಿನಾಂಕ (ದೃಢೀಕೃತ ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು)	
4	ವಿದ್ಯಾರ್ಹತೆ (ದೃಢೀಕೃತ ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು)	
5	ಮೊಬೈಲ್ ಸಂಖ್ಯೆ	
6	ತಾಯಿಯ ಹೆಸರು	
7	ತಂದೆಯ ಹೆಸರು	
8	ಪೂರ್ಣ ವಿಳಾಸ	
9	ಪಿನ್ ಕೋಡ್‌ಸಂಖ್ಯೆ	
10	ಸ್ವಂತ ಜಿಲ್ಲೆ	
11	ಅನುಯಾಯಿ ಹುದ್ದೆಗೆ ನೇಮಕಾತಿ ಹೊಂದಲು ಇಚ್ಛಿಸಿರುವ ವೃತ್ತಿ (Trade) (ಇದ್ದಲ್ಲಿ ಅದರ ದೃಢೀಕರಣ ಪತ್ರದ ಪ್ರತಿ.)	

12	ಮೀಸಲಾತಿ ಕೋರುವ ಪ್ರವರ್ಗ (ದೃಢೀಕೃತ ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು)	
13	ಉಪಜಾತಿ	
14	ಗ್ರಾಮೀಣ ಅಭ್ಯರ್ಥಿಯೇ (ದೃಢೀಕೃತ ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು)	
15	ಮಹಿಳಾ ಅಭ್ಯರ್ಥಿಯೇ (ದೃಢೀಕೃತ ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು)	
16	ಮಾಜೀ ಸೈನಿಕ ಅಭ್ಯರ್ಥಿಯೇ. (ದೃಢೀಕೃತ ಪ್ರಮಾಣ ಪತ್ರದ ಪ್ರತಿ ಲಗತ್ತಿಸುವುದು)	
17	ಸರ್ಕಾರಿ ನೌಕರನೇ (ಆಗಿದ್ದಲ್ಲಿ ವಿವರ ನೀಡುವುದು)	
18	ಅಪರಾಧ ಪ್ರಕರಣದಲ್ಲಿ ಭಾಗಿಯಾಗಿದ್ದೀರಾ?/ ಅಪರಾಧ ಮೊಕದ್ದಮೆಯಲ್ಲಿ ಶಿಕ್ಷೆಗೆ ಒಳಪಟ್ಟಿರುವುವಿರಾ?	
19	ಬ್ಯಾಂಕ್ ಡಿಡಿ ಸಂಖ್ಯೆ. ದಿನಾಂಕ. ಮತ್ತು ಪಾವತಿಸಿದ ಮೊತ್ತದ ವಿವರ.	

ದಿನಾಂಕ: / /2016 ಅಭ್ಯರ್ಥಿಯ ಸಹಿ

ಘೋಷಣೆ

1. ಅರ್ಜಿಯಲ್ಲಿ ತಿಳಿಸಿರುವ ವಿವರಗಳು ನನಗೆ ತಿಳಿದ ಮಟ್ಟಿಗೆ ಮತ್ತು ನಾನು ನಂಬುವಷ್ಟರ ಮಟ್ಟಿಗೆ ನಿಜವೆಂದು ಪೂರ್ಣವೆಂದು ಮತ್ತು ಸರಿಯಿದೆಯೆಂದು ಈ ಮೂಲಕ ಘೋಷಿಸುತ್ತೇನೆ. ನಾನು ನೀಡಲಾದ ಯಾವುದೇ ಮಾಹಿತಿಯು ಪರೀಕ್ಷೆ/ ನೇಮಕಾತಿ ಮುಂಚೆ, ನಡೆಯುವಾಗ ಅಥವಾ ತರುವಾಯ ಸುಳ್ಳು/ತಪ್ಪೆಂದು ಕಂಡು ಬಂದ ಸಂದರ್ಭದಲ್ಲಿ ಅಥವಾ ಅನರ್ಹತೆ ಪತ್ತೆಯಾದ ಸಂದರ್ಭದಲ್ಲಿ ನೇಮಕಾತಿ ಸಮಿತಿಯು ನನ್ನ ವಿರುದ್ಧ ನಿಯಮಾನುಸಾರ ಕ್ರಮಕೈಗೊಳ್ಳಬಹುದೆಂದು ನನಗೆ ತಿಳಿದಿರುತ್ತದೆ.
2. ನಾನು ಅಧಿಸೂಚನೆಯಲ್ಲಿ ನಮೂದಿಸಿರುವ ನಿಯಮ ಮತ್ತು ವಿನಿಯಮಗಳನ್ನು ಹಾಗೂ ಎಲ್ಲಾ ಷರತ್ತುಗಳನ್ನು ಜಾಗರೂಕತೆಯಿಂದ ಓದಿರುತ್ತೇನೆ. ಮತ್ತು ಅವುಗಳಿಗೆ ಬದ್ದನಾಗಿದ್ದು ಕಟ್ಟುನಿಟ್ಟಾಗಿ ಪಾಲಿಸುತ್ತೇನೆಂದು ಘೋಷಿಸುತ್ತೇನೆ. ನಾನು ಅರ್ಜಿ ಸಲ್ಲಿಸಿದ ಹುದ್ದೆಯ ನೇಮಕಾತಿ ನಿಗಧಿಪಡಿಸಿದ ವಯೋಮಿತಿ, ವಿದ್ಯಾರ್ಹತೆ ಮುಂತಾದ ಇತರೆ ಎಲ್ಲಾ ಅರ್ಹತಾ ಷರತ್ತುಗಳನ್ನು ಪೂರೈಸಿರುತ್ತೇನೆ. ನಾನು ಈ ಪ್ರಕ್ರಿಯೆಯಲ್ಲಿ ಹಾಜರಾಗಲು ಈ ಹಿಂದೆ ಉಚ್ಚಾಟಿಸಲ್ಪಟ್ಟಿಲ್ಲವೆಂದು ಈ ಮೂಲಕ ಘೋಷಿಸುತ್ತೇನೆ.
3. ನಾನು ಈ ಹುದ್ದೆಯ ಆಯ್ಕೆಯ ಸಲುವಾಗಿ ಅರ್ಜಿ ಸಲ್ಲಿಸುತ್ತಿರುವುದು ಈ ಹುದ್ದೆಯ ನಿಯಮ ಮತ್ತು ವಿನಿಯಮಗಳನ್ನು ಒಪ್ಪಿಕೊಂಡಂತೆ ಆಗಿರುತ್ತದೆಂದು ನನಗೆ ಸಂಪೂರ್ಣವಾಗಿ ತಿಳಿದಿರುತ್ತದೆ. ನೇಮಕಾತಿ ಪ್ರಕ್ರಿಯೆಯಲ್ಲಿ ಪಾಲ್ಗೊಂಡು ಆಯ್ಕೆಯಾಗದಿದ್ದಲ್ಲಿ, ಪಾಲ್ಗೊಂಡಿರುವ ಈ ನೇಮಕಾತಿ ನಿಯಮ ಮತ್ತು ವಿನಿಯಮಗಳನ್ನು ಪ್ರಶ್ನಿಸುವುದಿಲ್ಲವೆಂದು ಈ ಮೂಲಕ ಘೋಷಿಸುತ್ತೇನೆ.

ದಿನಾಂಕ: / /2016 ಅಭ್ಯರ್ಥಿಯ ಸಹಿ.

PR-128
SC-500

IN THE COURT OF 26TH ADDITIONAL CITY CIVIL JUDGE
MAYO HALL UNIT, AT BENGALURU CCH-20
P & S.C. No. 25048/2015.

PETITIONER :-

Mrs. P.A.TRESA,
D/o. Late. P.C.Mathew,
W/o. Late M.C. Joseph,
Aged about 83 Years,
Residing at HL No.172,
VP Khatha No.140, New Corporation No.15/2,
B.B.M.P. Ward No.68, Ejipura Village, Viveknagar Post,
Bengaluru-560047.

/// VS ///

RESPONDENT :- **NIL**

PUBLIC NOTICE

Notice is hereby given that a petition has been made to this court U/S. 276 of Indian Succession Act of 1925 for grant of Probate to succeed the assets of her deceased sister P.A.Mary who died on 18/09/2005 by executing the will Dt. 18/02/2005.

Be it know that no caveat has been entered and the said petition as is posted for **hearing on 23/09/2016 at 11 A.M.,** Any person/s claiming to have any interest may come and participate in the proceedings before grant of Probate Certificate in respect of the Schedule Property.

SCHEDULE

All that piece and parcel of Property bearing Sy. No. 61/2, Ejipura Village, Begur Hobli, Bengaluru South Taluk, now known as HL No.172, VP Khata No.140, Corporation No.15/2, Ward No.68, Ejipura Village, Viveknagara Post, Bengaluru-47, measuring East to West 86 Feet, North to South 50 Feet bounded on :-

East by :- Govt. Road now known as Ejipura Main Road,
West by :- Bachappa's Land,
North by :- Odiyappa's Land,
South by :- Venugopala's Land.

Given under my hand and the seal of the Court on this 24th day of August, 2016.

P.D. 41

SC – 05

BY ORDER OF THE COURT,
ASSISTANT REGISTRAR,
City Civil Court,
Mayo Hall, Bengaluru.

IN THE COURT OF THE XXVI ADDITIONAL CITY CIVIL JUDGE

CCH 20 MAYO HALL, BENGALURU

P & S.C. NO. 25032/2016.

1. MRS. KATTAMA,
AGED ABOUT 50 YEARS,
W/O LATE CHINNAPPA,
2. Mrs. SHOBA,
AGED ABOUT 36 YEARS,
D/O LATE CHINNAPPA,
3. Mrs. BHAGYA,
AGED ABOUT 34 YEARS,
D/O LATE CHINNAPPA,
PARTIES FROM 1 TO 3 ARE RESIDING AT:
599, NEAR NOORANI MOSQUE,
GUNDUTHOPP, HENNUR VILLAGE,
BENGALURU-560043.
4. Mrs. AKKAIYAMMA,
AGED ABOUT 49 YEARS,
D/O LATE BADIGYAPPA,
BIDIGANA HALLI VILLAGE,
CHICKABALLAPUR TALUK,
CHICKABALLAPUR DISTRICT. … CLAIMENTS

V/S

NIL … DEFENDANTS

PUBLIC NOTICE

Notice is hereby given that a petition has been made to this Court under Section, 372 of the Indian Succession Act, 1925 for grant of Succession Certificate in respect of the under mentioned schedule property left by the deceased late CHINNAPPA S/o late BADIGYAPPA, who died intestate on 30.12.2012 at Bengaluru, be it known to all that no caveat has been entered and the said petition is posted for **hearing on 19.09.2016 at 11.00 am** before the Hon'ble Court of XXVI ADDITIONAL CITY CIVIL AND SESSION JUDGE, MAYO HALL, BENGALURU (CCH-20) any person/s claiming to have any interest may appear before the Court on the above mentioned day either in person or through a pleader before grant of a Succession Certificate in favour of the petitioners.

SCHEDULE OF THE PROPERTY

ALL THAT PIECE AND PARCEL OF AGRICULTURAL LAND BEARING OLD SY. NO.28 NEW SURVEY NO. 134, SITUATED AT BYRATHI VILLAGE, BIDRAHALLI HOBLI, BENGALURU EAST TALUK, BENGALURU, MEASURING ABOUT 2 ACRES, BOUNDED ON:-

EAST BY	:	100 FEET ROAD (HENNUR BAGALUR MAIN ROAD)
WEST BY	:	SY. NO.145 OLD NO. 28
NORTH BY	:	SY. NO.135 OLD NO. 28
SOUTH BY	:	SY. NO.133 OLD NO. 28

Given under my hand and the seal of this Court on this 18th day of August, 2016.

SHAKEEL AHMED,

ADVOCATE, REGN: NO. KAR/827/90,
No. 313, I E CROSS, 3RD BLOCK, HRBR LAYOUT, KALYAN NAGAR,
BENGALURU-560084.
MOBILE NO: 9844266233

P.D. 42

BY ORDER OF THE COURT,
ASSISTANT REGISTRAR,
City Civil Court,
Mayo Hall Unit Bengaluru.

IN THE COURT OF IVTH ADDITIONAL CITY CIVIL JUDGE,

MAYO HALL UNIT, BENGALURU CCH-21.

P & S.C. No. 25057/2015, HG: 18/10/2016.

PETITIONER :-

DR. (MISS) DINAH THERESA LEVILLARD, aged 28 years, Daughter of late Stanley D.Levillard, Presently residing at No. 14/1, Scott Lane, Mackan Road Cross, Bharatinagar, Bengaluru – 560 001.

Versus

RESPONDENTS :-

1) **MRS. VIDA MARGARET LEVILLARD,** Aged 52 years, Daughter of late Stanley D.Levillard, And wife of Vincent Lucas, Presently residing at Green Garden Phase II, Banajara Layout, Green Garden Layout Road, Dodda Kempaiah Layout, Kalkere, Bengaluru – 560 066.
2) **MRS. ANN LINDA SHADROCH,** Aged 50 years, Daughter of late Stanley D.Levillard, And wife of Shadroch, Presently residing at No. 83, ANR Colony, Rajanna Layout, Kalyan Nagar, Bengaluru – 560 043.
